# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು

EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 31 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಶನಿವಾರ ದಿನಾಂಕ : 08-08-2026 ಪುಟ : 04 ಬೆಲೆ : 2-00


## ವರ್ಕ್ ಫ್ರಮ್ ಹೋಮ್ ಹೆಸರಲ್ಲಿ ಜನರಿಗೆ ಕೋಟಿ ಕೋಟಿ ವಂಚನೆ; ಖತರ್ನಾಕ್ ದಂಪತಿ ಬಂಧನ

ಬೆಂಗಳೂರು: ವರ್ಕ್ ಫ್ರಮ್ ಹೋಮ್ ಹೆಸರಿನಲ್ಲಿ ಜನರಿಂದ ಲಕ್ಷ ಲಕ್ಷ ಹಣ ಪಡೆದು ವಂಚಿಸಿದ್ದ ಖತರ್ನಾಕ್ ದಂಪತಿಯನ್ನು ದೇವನಹಳ್ಳಿ ಪೊಲೀಸರು ಶುಕ್ರವಾರ ಬಂಧಿಸಿದ್ದಾರೆ.

ಬಂಧಿತ ದಂಪತಿಯನ್ನು ಕಿರಣ್ ಮತ್ತು ಅವರ ಪತ್ನಿ ಆರತಿ ಎಂದು ಗುರುತಿಸಲಾಗಿದ್ದು, ಇಬ್ಬರೂ ಸೇರಿಕೊಂಡು ಕಾಳಿಕಾ ದೇವಿ ಎಂಟರ್ ಪ್ರೈಸಸ್ ಹೆಸರಲ್ಲಿ ಜನರಿಗೆ ಕೋಟಿ ಕೋಟಿ ರೂ. ವಂಚನೆ ಮಾಡಿದ್ದರು ಎಂದು ಆರೋಪಿಸಲಾಗಿದೆ.

ಈ ದಂಪತಿಗಳು, ಸಾವಿರಾರು ಜನರಿಗೆ ಮನೆಯಿಂದಲೇ ಮಾಡಲು ಕೆಲಸ ಕೊಡುವುದಾಗಿ ನಂಬಿಸಿ ವಂಚನೆ ಮಾಡಿದ್ದರು. ಇನ್‌ಸ್ಟಾಗ್ರಾಂನಲ್ಲಿ ವರ್ಕ್ ಫ್ರಮ್ ಹೋಮ್ ಕೆಲಸ ಕೊಡುವುದಾಗಿ ರೀಲ್ಸ್ ಮಾಡಿದ್ದರು. ಜನರಿಂದ ಲಕ್ಷ ಲಕ್ಷ ಹಣ ಡೆಪಾಸಿಟ್ ಮಾಡಿಸಿಕೊಂಡು ಬಳಿಕ ತಲೆಮರೆಸಿಕೊಂಡಿದ್ದರು. ಇಬ್ಬರೂ ಆರೋಪಿಗಳು ಇಂದು ದೇವನಹಳ್ಳಿ ಪೊಲೀಸರ ಕೈಗೆ ಸಿಕ್ಕಿಬಿದ್ದಿದ್ದಾರೆ.

ಈ ದಂಪತಿ, ಒಬ್ಬೊಬ್ಬರಿಂದ 2 ಲಕ್ಷದಿಂದ 20 ಲಕ್ಷದವರೆಗೂ ಹಣ ಡೆಪಾಸಿಟ್ ಮಾಡಿಸಿಕೊಂಡಿದ್ದರು. ಮೇಣದ ಬತ್ತಿ, ಡ್ರೈ ಫ್ರೂಟ್ಸ್, ಅಗರಬತ್ತಿ ಪ್ಯಾಕಿಂಗ್ ಕೆಲಸದ ಹೆಸರಲ್ಲಿ ಭಾರಿ ವಂಚನೆ ಎಸಗಿದ್ದಾರೆ ಎಂದು ಆರೋಪಿಸಲಾಗಿದೆ.

ಕಚ್ಚಾ ಪದಾರ್ಥಗಳ ಪ್ಯಾಕಿಂಗ್‌ಗೆ ಒಂದು ತಿಂಗಳಿಗೆ ಒಂದು ಲಕ್ಷ ಡೆಪಾಸಿಟ್ ಮಾಡಿದರೆ, ತಿಂಗಳಿಗೆ 23 ಸಾವಿರ ಹಣ ಕೊಡುವುದಾಗಿ ನಂಬಿಸಿದ್ದರು. ದಂಪತಿ ಮಾತು ನಂಬಿ ಜನ ಸಾಲ ಸೂಲ ಮಾಡಿ ಲಕ್ಷ ಲಕ್ಷ ಹಣ ಡೆಪಾಸಿಟ್ ಮಾಡಿದ್ದರು ಎನ್ನಲಾಗಿದೆ.



## ಉಡುಪಿಯಲ್ಲಿ ಬೆಚ್ಚಿಬೀಳಿಸಿದ ಶೂಟೌಟ್ ಕಾಂಗ್ರೆಸ್ ಮುಖಂಡನ ಹತ್ಯೆ

ಉಡುಪಿ: ಜಿಲ್ಲೆಯ ಕಾಪು ತಾಲೂಕಿನ ಶಿರ್ವ ಸಮೀಪದ ಮುದರಂಗಡಿಯಲ್ಲಿ ನಡೆದ ಗುಂಡಿನ ದಾಳಿ ಜಿಲ್ಲೆಯ ಜನರನ್ನ ಬೆಚ್ಚಿಬೀಳಿಸಿದೆ. ಮುದರಂಗಡಿ ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷ, ಉದ್ಯಮಿ ಹಾಗೂ ಕಾಂಗ್ರೆಸ್ ಮುಖಂಡ ಡೇವಿಡ್ ಡಿಸೋಜಾ ಅವರ ಮೇಲೆ ದುಷ್ಕರ್ಮಿಗಳು ಗುಂಡಿನ ದಾಳಿ ನಡೆಸಿದ್ದು, ಚಿಕಿತ್ಸೆ ಫಲಕಾರಿಯಾಗದೇ ಡಿಸೋಜಾ ಮೃತಪಟ್ಟಿದ್ದಾರೆ. ಪ್ರಕರಣದ ಹಿಂದಿನ ನಿಖರ ಕಾರಣ ಇನ್ನೂ ಬಹಿರಂಗವಾಗಿಲ್ಲ. ಮಾಹಿತಿಯ ಪ್ರಕಾರ, ಡೇವಿಡ್ ಡಿಸೋಜಾ ಅವರ ಮೇಲೆ ದುಷ್ಕರ್ಮಿಗಳು ಗುಂಡಿನ ದಾಳಿ ನಡೆಸಿದ ಬಳಿಕ ಅವರನ್ನು ತಕ್ಷಣವೇ ಶಿರ್ವದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ದಾಖಲಿಸಲಾಯಿತು. ವೈದ್ಯರು ದೇಹದಲ್ಲಿ ಸಿಲುಕಿದ್ದ ಗುಂಡನ್ನು ಹೊರತೆಗೆದ ನಂತರ ಹೆಚ್ಚಿನ ಚಿಕಿತ್ಸೆಗೆ ಉಡುಪಿ ಖಾಸಗಿ ಆಸ್ಪತ್ರೆಗೆ ಕರೆದೊಯ್ಯಲಾಗುತ್ತಿತ್ತು. ಆದರೆ ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆಯೇ ಅವರು ಕೊನೆಯುಸಿರೆಳೆದಿದ್ದಾರೆ. ಘಟನೆಯ ಸುದ್ದಿ ತಿಳಿಯುತ್ತಿದ್ದಂತೆ ಹಿರಿಯ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ವೈಯಕ್ತಿಕ ದ್ವೇಷ ಸೇರಿದಂತೆ ವಿವಿಧ ಆಯಾಮಗಳಲ್ಲಿ ತನಿಖೆ ಆರಂಭಿಸಿರುವ ಪೊಲೀಸರು ಆರೋಪಿಗಳ ಪತ್ತೆಗೆ ವಿಶೇಷ ತಂಡ ರಚಿಸಿ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಶಿವಮೊಗ್ಗ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಆಯ್ಕೆ ಸಭೆಯಲ್ಲಿ ಗಲಾಟೆ ವೀಕ್ಷಕರ ಎದುರೇ ಕಾರ್ಯಕರ್ತರ ಫೈಟಿಂಗ್ ಡೇವಿಡ್ ಡಿಸೋಜಾ ಶಿರ್ವ ಭಾಗದಲ್ಲಿ ಕಾಂಗ್ರೆಸ್ ಮುಖಂಡರಾಗಿ ಗುರುತಿಸಿಕೊಂಡಿದ್ದು, ಬಸ್ ಉದ್ಯಮ ಸೇರಿದಂತೆ ಹಲವು

2ನೇ ಪುಟಕ್ಕೆ....



# ತಲೆಕಡಿಸಿಕೊಳ್ಳಬೇಡಿ, ಆತಂಕ ಬೇಡ

## ಹೊಸದಾಗಿ ಸೇರ್ಪಡೆಯಾದ NDA ಸಂಸದರಿಗೆ ಮೋದಿ ಅಭಯ




ನವದೆಹಲಿ: ಮುಂಗಾರು ಅಧಿವೇಶನದ ರಾಜಕೀಯ ಬೆಳವಣಿಗೆಗಳ ನಡುವೆ, ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟಕ್ಕೆ ಹೊಸದಾಗಿ ಸೇರ್ಪಡೆಗೊಂಡ ಬಂಡಾಯ ಸಂಸದರೊಂದಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಶುಕ್ರವಾರ ದೆಹಲಿಯಲ್ಲಿ ವಿಶೇಷ ಉಪಹಾರ ಸಭೆ ನಡೆಸಿದರು. ಸಭೆಯಲ್ಲಿ ಮಾತನಾಡಿದ ಪ್ರಧಾನಿ, ನಿಮ್ಮ ಬಗ್ಗೆ ಯಾರು

2ನೇ ಪುಟಕ್ಕೆ...

## ಡಿಕೆಶಿ ನೇತೃತ್ವದ ಸಂಪುಟ ವಿಸ್ತರಣೆ

# ಮುಂದುವರೆದ ಕಗ್ಗಂಟು

ಬೆಂಗಳೂರು: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸಚಿವ ಸಂಪುಟ ವಿಸ್ತರಣೆಯಾಗಿ ಐದು ದಿನಗಳು ಕಳೆದರೂ ನೂತನ ಸಚಿವರಿಗೆ ಇನ್ನೂ ಖಾತೆಗಳ ಹಂಚಿಕೆ ಮಾಡಿಲ್ಲ. ಹಲವು ಸಚಿವರು ಪ್ರಮುಖ ಖಾತೆಗಳಿಗೆ ಪಟ್ಟು ಹಿಡಿದಿರುವುದು ಮತ್ತು ಇನ್ನು ಕೆಲವರು ತಮಗೆ ಸೂಚಿಸಿದ ಖಾತೆಗಳು ಬೇಡ ಎಂದು ಹೇಳಿರುವುದರಿಂದ ಖಾತೆ ಹಂಚಿಕೆ ಕಗ್ಗಂಟಾಗಿದೆ. ಅಲ್ಲದೇ, ಮಹಿಳಾ ಕೋಟಾದಡಿ ಒಂದು ಸ್ಥಾನ ಕೂಡ ತುಂಬಬೇಕಾಗಿದೆ. ಸಂಪುಟ ವಿಸ್ತರಣೆಯಿಂದ ಉದ್ಭವಿಸಿರುವ ಪರಿಸ್ಥಿತಿ ಇನ್ನೂ ತಣಿದಿಲ್ಲ. ಅದರ ಮಧ್ಯೆ ಖಾತೆ ಹಂಚಿಕೆ ಅಸಮಾಧಾನದ ಕಿಚ್ಚು ಹೊತ್ತಿದರೆ ಪರಿಸ್ಥಿತಿ ಕಷ್ಟವಾಗಬಹುದು ಎಂಬ ಕಾರಣಕ್ಕೆ ಮುಖ್ಯಮಂತ್ರಿಯವರು ಖಾತೆ ಹಂಚಿಕೆ ತಡೆ ಹಿಡಿದಿದ್ದಾರೆ ಎಂದು ಮೂಲಗಳು ಹೇಳಿವೆ. ಶಿವಕುಮಾರ್ ಅವರು ಕೆಲವು ಹಿರಿಯ ಸಚಿವರನ್ನು ಕರೆದು ಈ ಹಿಂದೆ ನಿರ್ವಹಿಸಿದ್ದ ಖಾತೆಗಳನ್ನೇ ನಿರ್ವಹಿಸುವಂತೆ ಸಲಹೆ ನೀಡಿದ್ದರು. ಆದರೆ, ಕೆಲವು ಸಚಿವರು ತಾವು ಹಿಂದೆ ನಿರ್ವಹಿಸಿದ್ದ ಮಹತ್ವವಲ್ಲದ



2ನೇ ಪುಟಕ್ಕೆ...

## ವಿಜಯನಗರ ಜಿಲ್ಲೆಯಲ್ಲಿ ಭೀಕರ ಮುಂಗಾರು ಅಭಾವ ಹಾಗೂ ಶೇ.60 ರಷ್ಟು ಮಳೆ ಕೊರತೆ:

# ಬರ ಪರಿಸ್ಥಿತಿ ನಿರ್ವಹಣೆಗೆ ಜಿಲ್ಲಾಡಳಿತದಿಂದ ಸಿದ್ಧತೆ

ವಿಜಯನಗರ : ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ವಿಜಯನಗರ ಜಿಲ್ಲೆಯಾದ್ಯಂತ ತೀವ್ರ ಮಳೆ ಕೊರತೆ ಎದುರಾಗಿದ್ದು, ಜಿಲ್ಲೆಯನ್ನು ಭೀಕರ ಬರ ಪರಿಸ್ಥಿತಿ ಆವರಿಸಿದೆ. ಜೂನ್ 1 ರಿಂದ ಆಗಸ್ಟ್ 6 ರವರೆಗಿನ ಅವಧಿಯಲ್ಲಿ ವಾಡಿಕೆ ಮಳೆಯಾದ 188.7 ಮಿ.ಮೀ.ಗೆ ಪ್ರತಿಯಾಗಿ ಕೇವಲ 76.0 ಮಿ.ಮೀ. ಮಳೆಯಾಗಿದ್ದು, ಶೇಕಡಾ 60 ರಷ್ಟು ಮಳೆ ಅಭಾವ ದಾಖಲಾಗಿದೆ. ಈ ಹಿನ್ನೆಲೆಯಲ್ಲಿ ರೈತರ ನೆರವಿಗೆ ಸರ್ಕಾರ ಮುಂದಾಗಿದೆ ಎಂದು ಸಚಿವರಾದ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ತಿಳಿಸಿದರು.

ಅವರು ಶುಕ್ರವಾರ ಜಿಲ್ಲೆಯಲ್ಲಿ ಬರ ಅಧ್ಯಯನ ನಡೆಸಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದರು. ಸರ್ಕಾರದ ಸೂಚನೆಯಂತೆ ರಾಜ್ಯಾದ್ಯಂತ ಬರ ಅಧ್ಯಯನ ಮಾಡಿ ಸರ್ಕಾರಕ್ಕೆ ವರದಿ ಸಲ್ಲಿಸಲು ಪ್ರವಾಸ ಕೈಗೊಳ್ಳಲಾಗಿದೆ.

ಜಲಾಶಯದಲ್ಲಿ ನೀರು ಲಭ್ಯವಿದ್ದು ಕುಡಿಯುವ ನೀರಿಗೆ ಸಮಸ್ಯೆ ಇರುವುದಿಲ್ಲ. ಗ್ರಾಮೀಣ ಭಾಗದಲ್ಲಿ 56 ಖಾಸಗಿ ಬೋರ್ ವೆಲ್ ಗಳಿಂದ ನೀರು ಪೂರೈಕೆ ಮಾಡಲಾಗುತ್ತಿದೆ, ಇದನ್ನು ಹೊರತುಪಡಿಸಿ ಬೇರೆ ಸಮಸ್ಯೆ ಇಲ್ಲ, ಮುಂದಿನ ದಿನಗಳಲ್ಲೂ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕ್ರಮ ವಹಿಸಬೇಕೆಂದರು. ನಗರ ಸ್ಥಳೀಯ ಸಂಸ್ಥೆಗಳಲ್ಲಿ ಯು ಕುಡಿಯುವ ನೀರಿನ ಸಮಸ್ಯೆ ಇರುವುದಿಲ್ಲ.

ಬಿತ್ತನೆ ಹಿನ್ನಡೆ ಒಟ್ಟು 2,97,633 ಹೆಕ್ಟೇರ್ ಬಿತ್ತನೆ ಗುರಿಯಲ್ಲಿ ಕೇವಲ 1,93,670 ಹೆಕ್ಟೇರ್ (ಶೇ. 65.07) ಮಾತ್ರ ಬಿತ್ತನೆಯಾಗಿದೆ. ಮಳೆಯಾಶ್ರಿತ ಪ್ರದೇಶದ 1,43,063 ಹೆಕ್ಟೇರ್ ಪೈಕಿ 1,25,717 ಹೆಕ್ಟೇರ್‌ಗೂ ಹೆಚ್ಚಿನ ಪ್ರದೇಶದಲ್ಲಿ (ಶೇ. 87 ಕ್ಕೂ ಹೆಚ್ಚು) ಬೆಳೆಗಳು ತೇವಾಂಶ ಕೊರತೆಯಿಂದ ಬಾಡಿ ಒಣಗುತ್ತಿವೆ.

ಬೆಳೆಗಳ ಸ್ಥಿತಿ: ಜೋಳ, ಮೆಕ್ಕೆಜೋಳ, ಸೂರ್ಯಕಾಂತಿ ಹಾಗೂ ಸಿರಿಧಾನ್ಯ ಬೆಳೆಗಳು ಶೇ. 40 ರಿಂದ ಶೇ. 90 ರಷ್ಟು ಒಣಗಿ ಕುಂಠಿತಗೊಂಡಿವೆ. ತೋಟಗಾರಿಕೆ ಬೆಳೆಗಳು: ಈರುಳ್ಳಿ, ಟೊಮಾಟೊ ಮತ್ತು ಮೆಣಸಿನಕಾಯಿ ಬೆಳೆಗಳಲ್ಲಿ ಸುಮಾರು 1,289 ಹೆಕ್ಟೇರ್ ಪ್ರದೇಶ ತೀವ್ರ ಹಾನಿಗೊಳಗಾಗಿದೆ. ತುಂಗಭದ್ರಾ ಜಲಾಶಯ ಹಾಗೂ ಕುಡಿಯುವ ನೀರು: ತುಂಗಭದ್ರಾ ಜಲಾಶಯ ಒಟ್ಟು 105.78 ಟಿಎಂಸಿ ಸಾಮರ್ಥ್ಯದಲ್ಲಿ ಪ್ರಸ್ತುತ 64.81 ಟಿಎಂಸಿ ನೀರು ಲಭ್ಯವಿದೆ ಎಂದರು.

ರಾಷ್ಟ್ರೀಯ ಮತ್ತು ರಾಜ್ಯ ಜಲನೀತಿಯನ್ವಯ ಜಲಾಶಯದಲ್ಲಿರುವ ನೀರನ್ನು ಕೇವಲ ಕುಡಿಯುವ ಉದ್ದೇಶಕ್ಕೆ ಮಾತ್ರ ಪ್ರಥಮ ಆದ್ಯತೆಯ ಮೇಲೆ ಕಾಯ್ದಿರಿಸಲಾಗಿದೆ. ರೈತರು ಕೃಷಿಗಾಗಿ ಈ ನೀರನ್ನು ನಂಬದೆ ಪರ್ಯಾಯ ಬೆಳೆಗಳನ್ನು ಆಶ್ರಯಿಸಲು ರೈತರಿಗೆ ಮನವರಿಕೆ ಮಾಡಲು ತಿಳಿಸಲಾಯಿತು.



**ರೈತರ ಸಾಲಕ್ಕೆ ಬ್ಯಾಂಕ್ ಗಳಿಂದ ನೋಟಿಸ್ ನೀಡಲಾಗುತ್ತಿದೆ ಎಂದು ರೈತರು ತಿಳಿಸಿದ್ದು ಈ ಬಗ್ಗೆ ಮುಖ್ಯಮಂತ್ರಿಗಳ ಬಳಿ ಚರ್ಚಿಸಲಾಗುತ್ತದೆ, ಜಿಲ್ಲಾ ಹಂತದಲ್ಲಿ ಬ್ಯಾಂಕರ್ಸ್‌ಗಳ ಸಭೆ ನಡೆಸಿ ನಿರ್ದೇಶನ ನೀಡಲು ಜಿಲ್ಲಾಧಿಕಾರಿಗಳಿಗೆ ತಿಳಿಸಿದರು.**

**ಹೊಸಪೇಟೆ:** 47.2 ಮಿ.ಮೀ ಮಳೆ ಶೇ 77%
**ಹಗರಿಬೊಮ್ಮನಹಳ್ಳಿ** 69.3 ಮಿ.ಮೀ ಮಳೆ 63%
**ಹೂವಿನಹಡಗಲಿ:** 67.5 ಮಿ.ಮೀ ಮಳೆ 59%
**ಹರಪನಹಳ್ಳಿ:** 91.5 ಮಿ.ಮೀ ಮಳೆ 57%
**ಕೂಡ್ಲಿಗಿ:** 83.1 ಮಿ.ಮೀ ಮಳೆ 47%
**ಕೊಟ್ಟೂರು:** 83.1 ಮಿ.ಮೀ ಮಳೆ 44%

ಕುಡಿಯುವ ನೀರು: ಗ್ರಾಮೀಣ ಪ್ರದೇಶಗಳಲ್ಲಿ 32 ಗ್ರಾಮಗಳಿಗೆ 44 ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆಗೆ ಪಡೆದು ನೀರು ಪೂರೈಸಲಾಗುತ್ತಿದೆ. ಮೇವು ಸಂಗ್ರಹ: ಜಿಲ್ಲೆಯಲ್ಲಿ ಪ್ರಸ್ತುತ 7,61,571 ಟನ್ ಮೇವು ಲಭ್ಯವಿದ್ದು, ಮುಂದಿನ 50 ವಾರಗಳಿಗೆ ಜಾನುವಾರುಗಳಿಗೆ ಮೇವಿನ ಅಭಾವವಿರುವುದಿಲ್ಲ. ಬರ ನಿರ್ವಹಣೆಗಾಗಿ ಜಿಲ್ಲಾಧಿಕಾರಿಗಳು ಹಾಗೂ ತಹಶೀಲ್ದಾರ್ ಖಾತೆಗಳಲ್ಲಿ ಒಟ್ಟು 916.09 ಲಕ್ಷ ಅನುದಾನ ಲಭ್ಯವಿದೆ.

ಬೆಳೆ ವಿಮೆ: ನಷ್ಟ ಪರಿಹಾರ ಪಡೆಯಲು ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿ ಬೆಳೆ ವಿಮೆ ನೋಂದಣಿ ಮಾಡಿಸಿಕೊಳ್ಳಲು ತಿಳಿಸಿದರು.

# ಎಸ್‌ಐಆರ್ ಮುಗಿದ ತಕ್ಷಣವೇ ಗೃಹಲಕ್ಷ್ಮಿ ಸರದಿ





### ಗೃಹಲಕ್ಷ್ಮಿ ಮಾರ್ಗಸೂಚಿ ಏನು?

1. ಆಹಾರ ಇಲಾಖೆಯ ಬಯೋಮೆಟ್ರಿಕ್ ದೃಢೀಕರಣದ ಮೂಲಕ ಫಲಾನುಭವಿಗಳನ್ನು ಪತ್ತೆ ಹಚ್ಚಬೇಕು.
2. ಪ್ರತಿ ನ್ಯಾಯಬೆಲೆ ಅಂಗಡಿಗಳ ಮೂಲಕ ಬಯೋಮೆಟ್ರಿಕ್ ಪರಿಶೀಲಿಸಿ ಗುರುತು ಹಚ್ಚಬೇಕು.
3. ಆಹಾರ ಇಲಾಖೆಯ ಡೇಟಾ ಬೇಸ್‌ನಲ್ಲಿ ಫಲಾನುಭವಿಯ ಬಯೋಮೆಟ್ರಿಕ್ ಕೊಡಬೇಕು.
4. ಬೆಂಗಳೂರು ಒನ್, ಗ್ರಾಮ ಒನ್ ಮತ್ತು ಕರ್ನಾಟಕ ಒನ್ ಗಳಲ್ಲಿ ಬಯೋಮೆಟ್ರಿಕ್ ಕೊಡಬೇಕು.
5. ಗೃಹಲಕ್ಷ್ಮೀ ಫಲಾನುಭವಿಗಳು ಸ್ವಇಚ್ಛೆಯಿಂದ ಸೌಲಭ್ಯ ನಿರಾಕರಿಸಬಹುದಾಗಿದೆ.

ಬೆಂಗಳೂರು: ಎಸ್‌ಐಆರ್ ಮುಗಿದ ತಕ್ಷಣವೇ ರಾಜ್ಯದಲ್ಲಿ ಗೃಹಲಕ್ಷ್ಮಿ ಮರುಪರಿಶೀಲನೆ ಆಗಲಿದೆ. ಈಗಾಗಲೇ ಗೃಹಲಕ್ಷ್ಮೀ ಫಲಾನುಭವಿಗಳ ಪತ್ತೆ ಹಚ್ಚುವುದಕ್ಕೆ ಸರ್ಕಾರ ಮಾರ್ಗಸೂಚಿ ಪ್ರಕಟಿಸಿದೆ. ಗೃಹಲಕ್ಷ್ಮಿ ಅರ್ಜಿ ಮರುಪರಿಶೀಲನೆಗೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಸಮಿತಿ ರಚನೆ ಮಾಡಿ ಸರ್ಕಾರ ಆದೇಶಿಸಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು. ಗ್ಯಾರಂಟಿ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷರು, ಪದಾಧಿಕಾರಿಗಳು ಅದೇ ರೀತಿ, ತಾಲೂಕು ಮಟ್ಟದ ಸಮಿತಿಯಲ್ಲಿ ತಹಸೀಲ್ದಾರ್ ಮತ್ತು ತಾಲ್ಲೂಕು ಮಟ್ಟದ ಸರ್ಕಾರದ ಅಧಿಕಾರಿಗಳು ಹಾಗೂ ತಾಲೂಕು ಮಟ್ಟದ ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯರು ಈ ಸಮಿತಿಯಲ್ಲಿ ಇರಲಿದ್ದಾರೆ. ಈ ಸಮಿತಿಯ ಸಮ್ಮುಖದಲ್ಲೇ ಗೃಹಲಕ್ಷ್ಮೀ ಅರ್ಜಿ ಮರು ಪರಿಶೀಲನೆ ಆಗಬೇಕಿದೆ. ಸಮೀಕ್ಷೆಗೆ ಹೋದಾಗ ಯೋಜನೆ ಫಲಾನುಭವಿಗಳು ಭಾವಚಿತ್ರದ ಜೊತೆಗೆ ಮತದಾರರ ಗುರುತಿನ ಚೀಟಿ ನೀಡುವುದು ಕಡ್ಡಾಯಗೊಳಿಸಲಾಗಿದೆ. ಮರು ಪರಿಶೀಲನೆ ವೇಳೆ ಪಿಂಚಣಿದಾರರು, ಐಟಿ, ಜಿಎಸ್‌ಟಿದಾರರು, ಸರ್ಕಾರಿ ಸೇವೆಯಲ್ಲಿರುವವರು ಹಾಗೂ ನಿವೃತ್ತಿ ಪಿಂಚಣಿ ಪಡೆಯುತ್ತಿರುವವರ ಮಾಹಿತಿ ಸಂಗ್ರಹ ಮಾಡಲಾಗುತ್ತದೆ.

# ಕಾರ್ಮಿಕರ ಬೇಡಿಕೆಗಳನ್ನು ಈಡೇರಿಸಲು ಗ್ರಾಮೀಣ ಕೂಲಿ ಕಾರ್ಮಿಕರ ಗ್ರಾಕೂಸ್ ಸಂಘಟನೆ ಒತ್ತಾಯ




ಕೊಟ್ಟೂರು: ಪಟ್ಟಣದ ತಾಲೂಕು ಪಂಚಾಯಿತಿ ಮುಂಭಾಗದಲ್ಲಿ ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆ(ಗ್ರಾಕೂಸ್) ಪಧಾದಿಕಾರಿಗಳು ಹಾಗೂ ಕೂಲಿ ಕಾರ್ಮಿಕರು. ವಿ.ಬಿ.ಜಿ.ರಾಮಜೀ ಅಡಿಯಲ್ಲಿ ಕೂಲಿ ಕೆಲಸ ಸಿಗುತ್ತಿಲ್ಲಾ ಹಾಗೂ ಕಾರ್ಮಿಕರಿಗೆ ಬಾಕಿ ಕೂಲಿ ಹಣ ನಿಂತಿದೆ ಕೂಡಲೇ ಕೇಂದ್ರ ಸರ್ಕಾರ ಕಾರ್ಮಿಕರಿಗೆ ಕೂಲಿ ಕೆಲಸ ನೀಡಬೇಕು. ಕೂಲಿ ಹಣ ಬಾಕಿ ಇರುವ ಗ್ರಾಮಗಳಾದ ಅಲುಬೂರು. ಉಜ್ಜಿಯಿನಿ. ಮಲ್ಲನಾಯಕನ ಹಳ್ಳಿ. ಗಂಗಮ್ಮನಹಳ್ಳಿ ಗ್ರಾಮಗಳ ಕೂಲಿ ಕಾರ್ಮಿಕರ ಕೂಲಿ ಹಣವನ್ನು ಪಾವತಿಸಬೇಕು. ಕೂಡಲೇ ಕೂಲಿ ಕಾರ್ಮಿಕರ ಬೇಡಿಕೆಗಳನ್ನು ಈಡೇರಿಸಬೇಕೆಂದು ನೇರಗಾ ಯೋಜನೆ ಅಧಿಕಾರಿಯಾದ ಟಿ ಸಿ ಶ್ರೀಕಾಂತ್ ರವರಿಗೆ ಮನವಿ ಪತ್ರಸಲ್ಲಿಸಿ ಒತ್ತಾಯಿಸಿದರು.

ಈ ಸಂಧರ್ಭದಲ್ಲಿ ಜಿಲ್ಲಾ ಸಂಚಾಲಕರಾದ ಅಕ್ಕಮಹಾದೇವಿ ಮಾತನಾಡಿ ಕೊಟ್ಟೂರು ತಾಲೂಕಿನಲ್ಲಿ ಮುಂಗಾರು ಮಳೆ ವಿಫಲವಾಗಿದ್ದು.ಬರಗಾಲ ಅವರಿಸಿದೆ ದುಡಿಯುವ ಕೈಗಳಿಗೆ ಕೆಲಸ ಇಲ್ಲಾದಂತಾಗಿದೆ. ಕೂಲಿ ಕಾರ್ಮಿಕರಿಗೆ ನಿರಂತರ ಕೂಲಿ ಕೆಲಸಬೇಕು.ಹಾಗೂ ಕಳೆದ 4 ತಿಂಗಳಿಂದ ಕೆಲಸ ಮಾಡಿದ ಕೂಲಿ ಹಣ ಇನ್ನೂ ಪಾವತಿ ಅಗಿಲ್ಲಾ ಕೂಡಲೇ ಬಾಕಿ ಕೂಲಿಯನ್ನು ಪಾವತಿ ಮಾಡಿ ಪಿ ಡಿ ಒ ಅಧಿಕಾರಿಗಳು ಕಾರ್ಮಿಕರಿಗೆ ಕಾರಣಗಳು ಹೇಳದೇ ಕಾರ್ಮಿಕರಿಗೆ ನಿರಂತರವಾಗಿ ಕೆಲಸ ನೀಡಬೇಕು. ದುಡಿಯುವ ಕೈಗಳಿಗೆ ಕೆಲಸ ಸಿಗವಂತಾಗಬೇಕು ಎಂದು ಒತ್ತಾಯಿಸಿದರು.

ತಾಲೂಕು ಸಂಚಾಲಕರಾದ ನೇತ್ರ ಮಾತನಾಡಿ ಕಾರ್ಮಿಕರಿಗೆ ಕೆಲಸ ಬೇಡಿಕೆ ಇರುವ ಪಂಚಾಯಿತಿ ಗ್ರಾಮಗಳ 1) ಅಲುಬೂರು ಪಂಚಾಯಿತಿ ಅಲುಬೂರು. 2) ಉಜ್ಜಿಯಿನಿ ಪಂಚಾಯಿತಿ ಉಜ್ಜಿಯಿನಿ. ಬಿ ಡಿ ಗುಡ್ಡ. ಬೆನಕನಹಳ್ಳಿ. 3)ಕೋಗಳಿ ಪಂಚಾಯಿತಿ ಕೋಡಿಹಳ್ಳಿ. 4) ಯಾಳ್ಯ ಪಂಚಾಯಿತಿ ಮಲ್ಲನಾಯಕನಹಳ್ಳಿ.5) ಕಾಳಪುರ ಪಂಚಾಯಿತಿ ಕಾಳಪುರ. 6) ಕೆ ಅಯ್ಯನಹಳ್ಳಿ ಪಂಚಾಯಿತಿ ಹರಾಳು ರಾಮನಾಯಕನಹಳ್ಳಿ ಕೂಲಿ ಕೆಲಸ ನೀಡಿ .ಕಾರ್ಮಿಕರ ಬೇಡಿಕೆಗಳನ್ನು ಹೀಡೇರಿಸಬೇಕು. ಹಾಗೂ ಕಳೆದು 4 ತಿಂಗಳಿಂದ ಕೇಂದ್ರ ಸರ್ಕಾರ ನಮ್ಮಿಂದ ದುಡಿಸಿಕೊಂಡು ಕಾರ್ಮಿಕರಿಗೆ ಕೂಲಿ ಹಣ ಬಿಡುಗಡೆ ಮಾಡುತ್ತಿಲ್ಲಾ ಕೂಡಲೇ ಕಾರ್ಮಿಕರಿಗೆ ಕೂಲಿ ಭತ್ಯೆ ಸಮೇತ ಹಣ ಪಾವತಿಸಬೇಕೆಂದು ಹೇಳಿದರು. ಸಂಘಟನೆ ಪಧಾದಿಕಾರಿಗಳು ತಾಲೂಕಿನ ಕೂಲಿ ಕಾರ್ಮಿಕರು ಒತ್ತಾಯಿಸಿ ಅಗ್ರಹಿಸಿದರು.

ಈ ಸಂಧರ್ಭದಲ್ಲಿ ತಾಲೂಕು ಸಂಚಾಲಕರು ಶಿಲ್ಪಾ. ಹಾಗೂ ರತ್ನಮ್ಮ.ಬಸವರಾಜಪ್ಪ ಕೋಗಳಿ.ಮಂಜಮ್ಮ. ಸಲ್ಮಾ.ಚಂದ್ರಮ್ಮ ಉಜ್ಜಿನಿ.ಬೀಮಪ್ಪ. ಶಿವರಾಜ್. ಸೈಯದ್ ಅಲುಬೂರು . ಕೂಲಿ ಕಾರ್ಮಿಕರು ಇತರರು ಇದ್ದರು

# ಶ್ರೀರಾಮ್ ಫೈನಾನ್ಸ್‌ನಲ್ಲಿ ಸರ್ವರ್ ಸಮಸ್ಯೆ!

## ಸಾರ್ವಜನಿಕರಿಗೆ ಯಾವುದೇ ಗೊಂದಲ ಬೇಡ : ಶಾಖೆ ವ್ಯವಸ್ಥಾಪಕ ಆನಂದ್




ಕುಣಿಗಲ್ : ಇತ್ತೀಚೆಗೆ ತಾಂತ್ರಿಕ ಸರ್ವರ್ ಸಮಸ್ಯೆಗಳಿಂದಾಗಿ ಗ್ರಾಹಕರು ಕಟ್ಟಿದ ಇಎಂಐ ಸರಿಯಾಗಿ ಅಪ್ಡೇಟ್ ಆಗದೆ ಕಪಿನಿಪಾಳ್ಯ ನಿಂಗಪ್ಪ ಎಂಬುವರ ಸಿಬಿಲ್ ಸ್ಕೋರ್ ಕುಸಿದಿರುವುದಕ್ಕೆ ಎರಡು ದಿನಗಳ ಹಿಂದೆ ಶ್ರೀರಾಮ್ ಫೈನಾನ್ಸ್ ಕಚೇ- ರಿಯ ಬಾಗಿಲು ಎಳೆದು ಸಿಬ್ಬಂದಿಗಳ ವಿರುದ್ಧ ತೀವ್ರ ಅಕ್ರೋಶ ಹೊರಹಾಕಿದ್ದರು,

ಇತ್ತೀಚಿನ ದಿನಗಳಲ್ಲಿ ಶ್ರೀರಾಮ್ ಫೈನಾನ್ಸ್ ನಲ್ಲಿ ಸಾಕಷ್ಟು ಸರ್ವರ್ ಸಮಸ್ಯೆ ಇದ್ದು ಸಾರ್ವಜನಿಕರು ಯಾವುದೇ ಆತಂಕಕ್ಕೊಳಗಾಗಬೇಡಿ ನಿಮ್ಮ ಲೋನ್ ಗೆ ಸಂಬಂಧಪಟ್ಟ ಯಾವುದೇ ಸಮಸ್ಯೆಗಳಿಗೆ ನೇರವಾಗಿ ನನ್ನನ್ನು ಭೇಟಿ ಮಾಡಿ ನಿಮ್ಮ ಸಿಬಿಲ್ ವರದಿಯಲ್ಲಿ ಶ್ರೀರಾಮ್ ಫೈನಾನ್ಸ್ ಇಂದ ಇಂತಹ ತಪ್ಪುಗಳು ಕಂಡು ಬಂದಲ್ಲಿ ಅದನ್ನು ಸರಿಪಡಿಸಲು ಸದಾ ನಿಮ್ಮ ಜೊತೆ ನಾವು ನಿಲ್ಲುತ್ತೇವೆ, ಸಂಸ್ಥೆಯು ದೂರುಗಳನ್ನು ಗಂಭೀರವಾಗಿ ಪರಿಗಣಿಸಿ ತಪ್ಪುಗಳನ್ನು ತಿದ್ದಿಕೊಳ್ಳುತ್ತಿರುವುದರಿಂದ ಹಲವು ಗ್ರಾಹಕರಿಗೆ ನ್ಯಾಯ ಸಿಗಲಾರಂಸಿದೆ, ಕಪಿನಿಪಾಳ್ಯ ನಿಂಗಪ್ಪ ಅವರ ಎಲ್ಲಾ ಲೋನ್ ಕೂಡ ಸಂಪೂರ್ಣವಾಗಿ ಮುಗಿದಿದೆ, ಅವರ ಸಮಸ್ಯೆಗೆ ಸದಾ ನಾವು ಜೊತೆಯಾಗಿರುತ್ತೇವೆ, ಎಂದು ಶ್ರೀ ರಾಮ್ ಫೈನಾನ್ಸ್ ಶಾಖ ವ್ಯವಸ್ಥಾಪಕರು ಆನಂದ್ ಎಟಿ, ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ,

ಈ ಸಂದರ್ಭದಲ್ಲಿ ಮಾತನಾಡಿದ ಕಪಿನಿಪಾಳ್ಯ ನಿಂಗಪ್ಪ ಅವರು ನಾನು ಲೋನ್ ಪಡೆಯದಿದ್ದರೂ ನನ್ನ ಹೆಸರಿಗೆ ತಪ್ಪು ಲೋನ್ ಖಾತೆಗಳು ಲಿಂಕ್ ಆಗಿರುವುದು,ಹಾಗೂ ಹಣ ಪಾವತಿಸಿದರು ತಾಂತ್ರಿಕ ದೋಷದಿಂದಾಗಿ 'ಬೌನ್ಸ್' ಎಂದು ತೋರಿಸುತ್ತಿರುವುದು,ಆತಂಕಕ್ಕೆ ಒಳಗಾಗಿದ್ದೇನು, ನಾನು ಪಡೆಯದ ಸಾಲಗಳನ್ನು ಕಮರ್ಷಿಯಲ್ ವೆಹಿಕಲ್ ಅಥವಾ ಪರ್ಸನಲ್ ಲೋನ್ ನನ್ನ ಹೆಸರಿನಲ್ಲಿ ಇತರೆ ಸಿಬಿಲ್ ಸ್ಕೋರ್ ಸೇರ್ಪಡೆಯಾಗಿತ್ತು, ನನ್ನ ಕ್ರೆಡಿಟ್ ಸ್ಕೋರ್ ಕೂಡ ಕುಸಿದಿತ್ತು, ಈ ಗಂಭೀರ ತಾಂತ್ರಿಕ ದೋಷ ಅಥವಾ ಸರ್ವ ಸಮಸ್ಯೆ ನಿರ್ಲಕ್ಷ್ಯದಿಂದಾಗಿ ನನ್ನ ಸಿವಿಲ್ ಸ್ಕೋರ್ ದಿಡೀರ್ ಕುಸಿದಿದ್ದು ನಾನು ಇತರೆ ಬ್ಯಾಂಕುಗಳಲ್ಲಿ ಹೊಸ ಸಾಲ ಪಡೆಯಲು ಪರದಾಡುವಂತಾಗಿತ್ತು, ನಂತರ ಶ್ರೀರಾಮ್ ಫೈನಾನ್ಸ್ ಕಚೇರಿಗೆ ತೆರಳಿ ನೇರವಾಗಿ ಶಾಖ ವ್ಯವಸ್ಥಾಪಕರಾದ ಆನಂದ್ ಎಟಿ,ಅವರನ್ನು ಭೇಟಿ ಮಾಡಿ ನಡೆದ ಘಟನೆಯ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದೆನು,ಅವರು ನನಗೆ ಸಹಾಯ ಮಾಡಿ ನೀವು ಯಾವುದೇ ಆತಂಕ ಕೊಳಗಾಗಬೇಡಿ , ಸರ್ವರ್ ಸಮಸ್ಯೆಯಿಂದ ಈ ರೀತಿ ಆಗಿದೆ ಮುಂದಿನ ದಿನಗಳಲ್ಲಿ ನಿಮ್ಮ ಸಿವಿಲ್ ಸ್ಕೋರ್ ಗೆ ಯಾವುದೇ ತೊಂದರೆ ಆಗದಂತೆ ನೋಡಿಕೊಳ್ಳುವ ಜವಾಬ್ದಾರಿ ನಮ್ಮದಾಗಿದೆ.

ನಮ್ಮಲ್ಲಿ ತಾಂತ್ರಿಕ ಸರ್ವರ್ ಸಮಸ್ಯೆಯಿಂದ ಸುಮಾರು 10 ದಿನಗಳಿಂದ ತೊಂದರೆ ಉಂಟಾಗಿದ್ದು ಅವುಗಳಿಗೆ ಕಿವಿ ಕೊಡಬೇಡಿ, ನೀವು ಲೋನ್ ಪಡೆಯದಿದ್ದರೂ ನಿಮ್ಮ ಹೆಸರಿಗೆ ತಪ್ಪು ಲೋನ್ ಖಾತೆಗಳು ಲಿಂಕ್ ಆಗಿರುವುದು ನನ್ನ ಗಮನಕ್ಕೆ ಬಂದಿದೆ,ಅದನ್ನು ಈ ಕೂಡಲೇ ಬಗೆಹರಿಸಿ ಕೊಡುತ್ತೇನೆ,ಎಂದು ಶ್ರೀರಾಮ್ ಫೈನಾನ್ಸ್ ಶಾಖಾ ವ್ಯವಸ್ಥಾಪಕ ಆನಂದ್ ಅವರು ಮಾಹಿತಿ ನೀಡಿದ್ದಾರೆ ಎಂದು ಕಪಿನಿ ಪಾಳ್ಯ ನಿಂಗಪ್ಪ ಅವರು ತಿಳಿಸಿದರು,,

# ತಹಸೀಲ್ದಾರ್ ವಿರುದ್ಧ ದಲಿತ ಮುಖಂಡರ ಆಕ್ರೋಶ

## ಸ್ವಾತಂತ್ರ್ಯ ದಿನಾಚರಣೆ ಪೂರ್ವಭಾವಿ ಸಭೆಯಲ್ಲೇ ತೀವ್ರ ಅಸಮಾಧಾನ

# ದಲಿತ ಸಮಸ್ಯೆಗಳ ನಿರ್ಲಕ್ಷ್ಯಕ್ಕೆ ಖಂಡನೆ



ಕುಣಿಗಲ್: ತಾಲ್ಲೂಕು ಕಚೇರಿಯಲ್ಲಿ ನಡೆದ ಸ್ವಾತಂತ್ರ್ಯ ದಿನಾಚರಣೆಯ ಪೂರ್ವಭಾವಿ ಸಭೆಯಲ್ಲಿ ತಹಸೀಲ್ದಾರ್ ವಿರುದ್ಧ ದಲಿತ ಮುಖಂಡರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು ಹಿರಿಯ ದಲಿತ ಮುಖಂಡರಾದ ಬಿಜಿ ಗಂಗಾಧರಾಯ ರವರು ಮಾತನಾಡಿ. ದಲಿತ ಸಮುದಾಯದ ಭೂಮಿ, ಗೋಮಾಳ ಜಮೀನು, ಮೂಲಸೌಕರ್ಯ ಹಾಗೂ ಕುಂದುಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಹಲವು ಬಾರಿ ಅಧಿಕಾರಿಗಳ ಗಮನಕ್ಕೆ ತಂದಿದ್ದರೂ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು.

ಸಭೆಯಲ್ಲಿ ಮಾತನಾಡಿದ ದಲಿತ ಸೇನೆ ಅಧ್ಯಕ್ಷರಾದ ವರದರಾಜು ಸರ್ಕಾರದ ಯೋಜನೆಗಳ ಫಲಾನುಭವಿಗಳಿಗೆ ನ್ಯಾಯ ಒದಗಿಸುವಲ್ಲಿ ತಾಲೂಕು ಆಡಳಿತ ವಿಫಲವಾಗಿದೆ. ದಲಿತರಿಗೆ ಮಂಜೂರಾದ ಭೂಮಿಗಳ ರಕ್ಷಣೆ, ಅಕ್ರಮ ಕಬಳಿಕೆ ತಡೆ, ದಲಿತರ ಕುಂದುಕೊರತೆ ಸಭೆಗಳ ನಿಯಮಿತ ಆಯೋಜನೆ ಹಾಗೂ ಬಾಕಿ ಉಳಿದ ಅರ್ಜಿಗಳ ವಿಲೇವಾರಿಯಲ್ಲಿ ತಹಸೀಲ್ದಾರ್ ನಿರ್ಲಕ್ಷ್ಯ ತೋರಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸಮಸ್ಯೆಗಳನ್ನು ತಕ್ಷಣವೇ ಬಗೆಹರಿಸಿ, ಕಾನೂನುಬದ್ಧವಾಗಿ ದಲಿತರಿಗೆ ನ್ಯಾಯ ಒದಗಿಸದಿದ್ದರೆ ಮುಂದಿನ ದಿನಗಳಲ್ಲಿ ತಾಲೂಕು ಕಚೇರಿ ಎದುರು ಉಗ್ರ ಹೋರಾಟ ನಡೆಸುವುದಾಗಿ ದಲಿತ ಮುಖಂಡರು ಎಚ್ಚರಿಕೆ ನೀಡಿ- ದರು. ಸಭೆಯಲ್ಲಿ ಹಿರಿಯ ದಲಿತ ಮುಖಂಡರುಗಳಾದ ಮಲ್ಲನಾಯಕನಹಳ್ಳಿ ವೆಂಕಟಗಿರಿಯಪ್ಪ, ಎಸ್ ಹೆಚ್ ಗೋಪಾಲಣ್ಣ, ಮಂಗಳ ಕೃಷ್ಣರಾಜು, ಗೌಡಗೆ- ರೆ ವರದರಾಜು, ಯಡವಾಣಿ ಶ್ರೀನಿವಾಸ್, ಗಂಗಾಧರ್ , ಆರ್ ಎನ್. ಹಟ್ಟಿ ರಂಗಯ್ಯ, ನರಸಿಂಹರಾಜು, ರಾಜಮುಡಿ, ಕೃಷ್ಣ, ಅನೇಕ ದಲಿತ ಮುಖಂಡರುಗಳು ಹಾಗೂ ಕೆಲವು ಇಲಾಖೆಯ ಅಧಿಕಾರಿಗಳು ಇದ್ದರು.

# ಮೇಕೆದಾಟು ಅಣೆಕಟ್ಟು ನಿರ್ಮಾಣ ಮಾಡಿದರೆ 137 ಟಿಎಂಸಿ ನೀರು ಲಭ್ಯ



ಶಿರಾ : ರಾಜ್ಯದ ಮಹತ್ವಕಾಂಕ್ಷಿಯ ನೀರಾವರಿ ಯೋಜನೆ ಮೇಕೆದಾಟು ಅಣೆಕಟ್ಟು ನಿರ್ಮಾಣ ಮಾಡಿದರೆ 137 ಟಿಎಂಸಿ ನೀರು ಲಭ್ಯವಾಗಲಿದ್ದು, ಬೆಂಗಳೂರು ನಗರ ಸೇರಿದಂತೆ ರಾಜ್ಯದ ಹಲವಾರು ಜಿಲ್ಲೆಗಳ ಕುಡಿಯುವ ನೀರಿನ ಸಮಸ್ಯೆ ಶಾಶ್ವತವಾಗಿ ನೀಗುವಂತಹ ಮೇಕೆದಾಟು ನೀರಾವರಿ ಯೋಜನೆ ಬಗ್ಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಮಧ್ಯೆ ಸೇತುವೆಯಂತೆ ಕೆಲಸ ಮಾಡಿ, ಸುಪ್ರೀಂ ಕೋರ್ಟ್ ನಲ್ಲಿ ಮೇಕೆದಾಟು ಯೋಜನೆ ಬಗ್ಗೆ ರಾಜ್ಯದ ಪರವಾಗಿ ಸಮಗ್ರ ಮಾಹಿತಿ ನೀಡಿ, ಅಣೆಕಟ್ಟು ನಿರ್ಮಾಣ ಮಾಡಲು ಇದ್ದ ಅಡೆ ತಡೆಗಳ ನಿವಾರಣೆ ಮಾಡುವಲ್ಲಿ ಮಹತ್ವದ ಪಾತ್ರವಹಿಸಿದ ನೀರಾವರಿ ತಜ್ಞ ಶಾಸಕ ಟಿ.ಬಿ. ಜಯಚಂದ್ರ ಅವರಿಗೆ ವಿಧಾನಸಭಾ ಸ್ಪೀಕರ್ ಸ್ಥಾನ ನೀಡುವ ಮೂಲಕ. ಸರ್ಕಾರ ಅವರ ಹಿರಿಯತನವನ್ನು ಗೌರವಿಸಬೇಕು ಎಂದು ಶಿರಾ ತಾಲೂಕಿನ ಪಟ್ಟನಾಯಕನಹಳ್ಳಿ ಶ್ರೀ ಗುರುಗ- ುಂಡ ಬ್ರಹ್ಮೇಶ್ವರ ಸ್ವಾಮಿ ಮಠ, ಸ್ಪಟಿಕಪುರಿ ಮಹಾಸಂಸ್ಥಾನದ ಪೀಠಾಧ್ಯಕ್ಷರಾದ ಶ್ರೀ ನಂಜಾವಧೂತ ಸ್ವಾಮೀಜಿ ಸರ್ಕಾರಕ್ಕೆ ಸಲಹೆ ನೀಡಿದರು.

ಶಾಸಕ ಸಿಟಿ.ಬಿ.ಜಯಚಂದ್ರರನ್ನು ಅವರ ಸ್ವಗೃಹದಲ್ಲಿ ಭೇಟಿ ಮಾಡಿ ಸಮಾಲೋಚನೆ ನಡೆಸಿ ಮಾತನಾಡಿದರು. 50 ವರ್ಷ ಗಳ ಸುಧೀರ್ಘ ರಾಜಕೀಯ ಅನುಭವ, ನೀರಾವರಿ ವಿಚಾರದಲ್ಲಿ ರಾಜ್ಯದಲ್ಲಿ ಮಾಜಿ ಪ್ರಧಾನಿ ಎಚ್. ಡಿ ದೇವೇಗೌಡ ರವರು ಬಿಟ್ಟರೆ, ನೀರಾವರಿ ಬಗ್ಗೆ ಸಮಗ್ರವಾಗಿ ಜ್ಞಾನ ಹೊಂದಿರುವ ಏಕೈಕ ವ್ಯಕ್ತಿ ಟಿ.ಬಿ.ಜಯಚಂದ್ರ ಅವರು ಇವರ ಅನುಭವ ವಿಚಾರಗಳನ್ನು ಸರ್ಕಾರ ಸಮರ್ಪಕ ವಾಗಿ ಬಳಸಿಕೊಳ್ಳಬೇಕು, ಇವರ ಹಿರಿತನಕ್ಕೆ ಉತ್ತಮ ಖಾತೆಯೇ ನೀಡಬೇಕಿತ್ತು, ಆದ- ರೆ ರಾಜಕೀಯ ಅನಿವಾರ್ಯತೆಗಳ ನಡುವೆ ಅವಕಾಶ ವಂಚಿತರಾಗಿದ್ದಾರೆ.

ಮುಖ್ಯಮಂತ್ರಿಡಿ.ಕೆ. ಶಿವಕುಮಾರ್ ರವರು ಕಾಂಗ್ರೆಸ್ ಹೈಕಮಾಂಡ್ ಮನವೊಲಿಸಿ ಜಯಚಂದ್ರ ಅವರಿಗೆ ವಿಧಾನಸಭೆ ಸ್ಪೀಕರ್ ತಾನು ನೀಡಿ ಗೌರವಿಸುವಂತಹ ಕೆಲಸ ಮಾಡಬೇಕು ಎಂದರು. ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮ ಅಧ್ಯಕ್ಷ ಹಾರೋ ಗೆರೆ ಮಹೇಶ್, ಕಾಂಗ್ರೆಸ್ ಮುಖಂಡ ಬೇತೂರು ರಾಜು, ಶಿರಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪಿ .ಆರ್ .ಮಂಜುನಾಥ್ ಸೇರಿದಂತೆ ಇತರರು ಇದ್ದರು.

## ಒಂದನೇ ಪುಟದಿಂದ..

### ಹೊಸದಾಗಿ ಸೇರ್ಪಡೆಯಾದ NDA ಸಂಸದರಿಗೆ ಮೋದಿ ಅಭಯ

ಏನು ಮಾತನಾಡುತ್ತಾರೆ ಎಂಬ ಬಗ್ಗೆ ತಲೆಕೆಡಿಸಿಕೊಳ್ಳಬೇಡಿ. ಯಾವುದೇ ಆತಂಕ ಪಡುವ ಅಗತ್ಯವಿಲ್ಲ, ನಾನು ನಿಮ್ಮೊಂದಿಗಿದ್ದೇನೆ ಎಂದು ಅಭಯ ನೀಡಿದ್ದಾರೆ.

ಎನ್‌ಡಿಎ ಮೈತ್ರಿಕೂಟಕ್ಕೆ ಸೇರ್ಪಡೆಯಾದ ಸುಮಾರು 45 ಸಂಸದರು ಈ ವಿಶೇಷ ಸಭೆಯಲ್ಲಿ ಭಾಗವಹಿಸಿದ್ದರು. ಇತ್ತೀಚೆಗೆ 'ನ್ಯಾಷನಲಿಸ್ಟ್ ಸಿಟಿಜನ್ಸ್ ಪಾರ್ಟಿ ಆಫ್ ಇಂಡಿಯಾ' (ಎನ್‌ಸಿಪಿಐ) ಪಕ್ಷದಲ್ಲಿ ವಿಲೀನಗೊಂಡ ತೃಣಮೂಲ ಕಾಂಗ್ರೆಸ್‌ನ 20 ಬಂಡಾಯ ಸಂಸದರು, ಉದ್ಧವ್ ಠಾಕ್ರೆ ಬಣದಿಂದ ಹೊರಬಂದು ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆ ಸೇರಿದ ಸಂಸದರು, ನ್ಯಾಷನಲ್ ಪೀಪಲ್ಸ್ ಪಾರ್ಟಿಯ (ಎನ್‌ಪಿಪಿ) 20 ಸಂಸದರು ಹಾಗೂ ಅಜಿತ್ ಪವಾರ್ ಬಣದ ಎನ್‌ಸಿಪಿಯ ಇಬ್ಬರು ಸಂಸದರು ಉಪಸ್ಥಿತರಿದ್ದರು.ಪಶ್ಚಿಮ ಬಂಗಾಳದ ಸಂಸದರನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ, ಸಾರ್ವಜನಿಕರೊಂದಿಗೆ ಸಂಪರ್ಕವನ್ನು ಹೆಚ್ಚಿಸುವಂತೆ ಸೂಚಿಸಿದರು.

ಪಶ್ಚಿಮ ಬಂಗಾಳ ಬೆಳೆದರೆ ಮಾತ್ರ ಭಾರತ ಬೆಳೆಯುತ್ತದೆ. ಬಂಗಾಳದ ಜೊತೆಗೆ ಈಶಾನ್ಯ ರಾಜ್ಯಗಳ ಸಂಪರ್ಕ ಮತ್ತು ಅಭಿವೃದ್ಧಿಗೂ ಆದ್ಯತೆ ನೀಡಬೇಕಿದೆ ಎಂದು ಮೂಲಗಳನ್ನು ಆಧಾರಿಸಿ ಮಾಧ್ಯಮ ವರದಿ ಮಾಡಿದೆ

ಮುಂಬರುವ ಕೆಲಸಗಳ ಪ್ರಮಾಣ ದೊಡ್ಡದಾಗಿರುವುದರಿಂದ ಸಂಸದರು ಪ್ರತಿವರ್ಷ ತಮ್ಮ ಮಾನಸಿಕ ಹಾಗೂ ದೈಹಿಕ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಪ್ರಧಾನಿ ಸಲಹೆ ನೀಡಿ- ದರು. ಸಭೆಯಲ್ಲಿ ಮಚ್ಚಾ ಟೀ ನೀಡಿದಾಗ, ಅದರ ವಿಶೇಷತೆಯನ್ನು ಪ್ರಧಾನಿಗೆ ವಿವರಿಸಿದ ಸಂಸದೆ ಶತಾಬ್ದಿ ರಾಯ್, ಇದು ಪಶ್ಚಿಮ ಬಂಗಾಳದಲ್ಲೂ ಲಭ್ಯವಿದೆ ಎಂದರು. ಇದೇ ವೇಳೆ ಹಿರಿಯ ಸಂಸದ ಸುದೀಪ್ ಬಂಡೋಪಾಧ್ಯಾಯ, ಪ್ರಧಾನಿಯವರ ಸುತ್ತ ಶತಾಬ್ದಿ ರಾಯ್, ಸಾಯೋನಿ ಘೋಷ್, ಜೂನ್ ಮಲಿಯಾ ಮತ್ತು ರಚನಾ ಬ್ಯಾನರ್ಜಿ ಅವರಂತಹ ಪ್ರಸಿದ್ಧ ನಟ-ನಟಿಯರೇ ತುಂಬಿದ್ದಾರೆ ಎಂದು ಹಾಸ್ಯ ಚಟಾಕಿ ಹಾರಿಸಿದರು.

### ಡಿಕೆಶಿ ನೇತೃತ್ವದ ಸಚಿವ ಸಂಪುಟ ವಿಸ್ತರಣೆ: ಮುಂದುವರೆದ ಕಗ್ಗಂಟು

ಖಾತೆಗಳನ್ನು ಈ ಬಾರಿ ನಿರ್ವಹಿಸಲು ಸಾಧ್ಯವಿಲ್ಲ, ಪ್ರಮುಖ ಖಾತೆಗಳನ್ನೇ ನೀಡಬೇಕು ಎಂದು ಪಟ್ಟು ಹಿಡಿದಿದ್ದಾರೆ ಎಂದು ಮೂಲಗಳು ತಿಳಿಸಿವೆ. ಮೊದಲ ಬಾರಿ ಸಚಿವರಾದವರಲ್ಲಿ ಕೆಲವರಿಗೆ ಪ್ರಮುಖ ಖಾತೆಗಳನ್ನೂ, ಇನ್ನು ಕೆಲವರಿಗೆ ನಿಗಮ ಮಂಡಳಿಯಷ್ಟು ಕಿಮ್ಮತ್ತಿಲ್ಲದ ಸಣ್ಣ ಪುಟ್ಟ ಖಾತೆಗಳನ್ನು ಸೂಚಿಸಿರುವುದೂ ಅಸಮಾಧಾನಕ್ಕೆ ಕಾರಣವಾಗಿದೆ. ಹೀಗಾಗಿ, ಖಾತೆಯ ಹಂಚಿಕೆಯ ಸಂಭವನೀಯ ಪಟ್ಟಿಯಲ್ಲಿ ಕೆಲವು ಬದಲಾವಣೆ ಆಗಬಹುದು. ಮೊದಲ ಕಂತಿನ ವಿಸ್ತರಣೆ ಆದಾಗ ಸಚಿವ ಕೃಷ್ಣ ಬೈರೇಗೌಡ ಮತ್ತು ರಾಮಲಿಂಗಾರೆಡ್ಡಿ ಅವರು ತಮ್ಮ ಖಾತೆ ಬದಲಿಸುವಂತೆ ಪಟ್ಟು ಹಿಡಿದಿದ್ದರು. ಕೃಷ್ಣ ಅವರನ್ನು ಶಿವಕುಮಾರ್ ಮನವೊಲಿಸಿದ್ದರು. ಆದರೆ, ಜಲಸಂಪನ್ಮೂಲ ಖಾತೆ ಬಿಟ್ಟು ಬೇರೆ ಖಾತೆಯನ್ನು ನೀಡುವಂತೆ ರಾಮಲಿಂಗಾರೆಡ್ಡಿ ತಮ್ಮ ಬೇಡಿಕೆಯನ್ನು ಮುಂದುವರೆಸಿದ್ದಾರೆ.

### ಶೂಟೌಟ್ : ಕಾಂಗ್ರೆಸ್ ಮುಖಂಡನ ಹತ್ಯೆ

ವ್ಯವಹಾರಗಳಲ್ಲಿ ತೊಡಗಿಸಿಕೊಂಡಿದ್ದರು.

ಈ ಹಿಂದೆ ಶಿರ್ವ ಚರ್ಚಿನ ಧರ್ಮಗುರು ಆತ್ಮಹತ್ಯೆ ಪ್ರಕರಣದಲ್ಲಿ ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಆರೋಪದಡಿ ಅವರ ವಿರುದ್ಧ ಪ್ರಕರಣ ದಾಖಲಾಗಿದ್ದು, ಬಂಧನಕ್ಕೂ ಒಳಗಾಗಿದ್ದರು. ಹಲವು ವಿವಾದಗಳ ಮೂಲಕವೂ ಅವರು ಸುದ್ದಿಯಾಗಿದ್ದರು.

ಸದ್ಯ ಡಿಸೋಜಾ ಅವರ ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಲಾಗಿದ್ದು, ಮಾಜಿ ಸಚಿವ ವಿನಯ್ ಕುಮಾರ್ ಸೊರಕೆ ಸೇರಿದಂತೆ ಹಲವು ಗಣ್ಯರು ಆಸ್ಪತ್ರೆಗೆ ಭೇಟಿ ನೀಡಿ ಅಂತಿಮ ದರ್ಶನ ಪಡೆದಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಉಡುಪಿ ಜಿಲ್ಲೆಯಲ್ಲಿ ಅಪರಾಧ ಪ್ರಕರಣಗಳು ಹೆಚ್ಚುತ್ತಿರುವ ಬೆನ್ನಲ್ಲೇ ನಡೆದಿರುವ ಈ ಶೂಟೌಟ್ ಪ್ರಕರಣ ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ.

ಪ್ರಕರಣದ ಹಿಂದಿನ ನಿಖರ ಕಾರಣವನ್ನು ಪತ್ತೆಹಚ್ಚಲು ಪೊಲೀಸರು ತನಿಖೆಯನ್ನು ಮತ್ತಷ್ಟು ತೀವ್ರಗೊಳಿಸಿದ್ದು,

ಆರೋಪಿಗಳ ಬಂಧನಕ್ಕಾಗಿ ವ್ಯಾಪಕ ಶೋಧ ಕಾರ್ಯ ಮುಂದುವರಿಸಿದ್ದಾರೆ.

# ಸಕಾಲಕ್ಕೆ ಬಾರದ ಮಳೆ, ಶೇ 60ರಷ್ಟು ಮಳೆ ಕೊರತೆ, ಮುಂಗಾರು ವಿಫಲ

## ಬೆಳೆ ನಷ್ಟ ಅನುಭವಿಸಿದ ಪ್ರತಿಯೊಬ್ಬ ರೈತರಿಗೂ ನ್ಯಾಯ ಒದಗಿಸಲು ಸರ್ಕಾರ ಬದ್ಧ: ಸಚಿವ ಜಮೀರ್



ವಿಜಯನಗರ: ವಿಜಯನಗರ ಜಿಲ್ಲೆಯ ವಿವಿಧ ತಾಲೂಕುಗಳು ಸೇರಿ ಪ್ರಸಕ್ತ ಮುಂಗಾರಿನಲ್ಲಿ ಶೇ 60 ರಷ್ಟು ಮಳೆಯ ಕೊರತೆಯಾಗಿದ್ದು ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಈ ಹಿನ್ನೆಲೆಯಲ್ಲಿ ಸಚಿವರಾದ ಬಿ. ಜೆಡ್ ಜಮೀರ್ ಅಹ್ಮದ್ ಖಾನ್ ಅವರು ಶುಕ್ರವಾರ ವಿಜಯನಗರ ಜಿಲ್ಲೆಯ ಬರಪೀಡಿತ ಭಾಗಗಳಿಗೆ ಭೇಟಿ ನೀಡಿ ಬೆಳೆ ಹಾನಿ ಮತ್ತು ರೈತರ ಸಮಸ್ಯೆಗಳನ್ನು ಖುದ್ದಾಗಿ ಪರಿಶೀಲನೆ ನಡೆಸಿದರು.

ಈ ವೇಳೆ ಮಾಧ್ಯಮ ಪ್ರತಿನಿಧಿಗಳಿಗೆ ಪ್ರತಿಕ್ರಿಯಿಸಿದ ಅವರು, ಕೃಷಿ ಮತ್ತು ಕಂದಾಯ ಇಲಾಖೆ ಅಧಿಕಾರಿಗಳಿಂದ ಜಂಟಿ ಸಮೀಕ್ಷೆ ನಡೆಸಿ, ಸಂಪೂರ್ಣ ವರದಿಯನ್ನು ಶೀಘ್ರದಲ್ಲೇ ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು. ಮುಂಗಾರು ಕೈಕೊಟ್ಟಿದೆ. ಕೆಲವು ರೈತರು ಬೆಳೆ ವಿಮೆ ಕಟ್ಟಿದ್ದಾರೆ, ಕೆಲ ರೈತರು ಬೆಳೆ ವಿಮೆ ಕಟ್ಟಿರುವುದಿಲ್ಲ. ಇನ್ನು ಕೆಲ ರೈತರು ಬಿತ್ತನೆ ಮಾಡದ ಹಿನ್ನೆಲೆಯಲ್ಲಿ ವಿಮೆಯನ್ನು ಪಾವತಿಸಲು ಸಾಧ್ಯವಾಗಿಲ್ಲ. ಬಹುತೇಕ ರೈತರು ಬೆಳೆ ವಿಮೆ ಪಾವತಿಸಿಲ್ಲ. ಆದಾಗ್ಯೂ, ವಿಮೆ ಮಾಡಿಸಿದ ಮತ್ತು ವಿಮೆ ಮಾಡಿಸದ ಇಬ್ಬರೂ ರೈತರ ಪಟ್ಟಿಯನ್ನು ಪ್ರತ್ಯೇಕವಾಗಿ ತಯಾರಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಕಳೆದ ವರ್ಷದ ವಿಮಾ ಪರಿಹಾರವಾಗಿ ರೂ.109.54 ಕೋಟಿ ಪೈಕಿ ಈಗಾಗಲೇ ರೂ.66.397 ಕೋಟಿ ಬಿಡುಗಡೆಯಾಗಿದ್ದು, ಬಾಕಿ 42.139 ಕೋಟಿ ರೂಪಾಯಿ ಬರಬೇಕಾಗಿದೆ ಎಂದರು.

ಪ್ರಸ್ತುತ ತುಂಗಭದ್ರಾ ಜಲಾಶಯದಲ್ಲಿ 69 ಟಿಎಂ ಸಿ ನೀರು ಸಂಗ್ರಹವಿದ್ದು, ಕುಡಿಯುವ ನೀರಿಗೆ ಯಾವುದೇ ಅಭಾವ ಎದುರಾಗುವುದಿಲ್ಲ. ಬರ ಪರಿಶೀಲನಾ ವರದಿಯನ್ನು ಶೀಘ್ರವಾಗಿ ಸಲ್ಲಿಸಿ, ಸಂಕಷ್ಟದಲ್ಲಿರುವ ರೈತರಿಗೆ ತಕ್ಷಣವೇ ಸರ್ಕಾರದಿಂದ ಸೂಕ್ತ ನಷ್ಟಪರಿಹಾರ ಒದಗಿಸಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ. ಈ ಕುರಿತು ಆಗಸ್ಟ್ 15ರ ಒಳಗಾಗಿ ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ಸೂಕ್ತ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂಬ ಭರವಸೆ ವ್ಯಕ್ತಪಡಿಸಿದರು.

ಮುಂಗಾರು ಹಂಗಾಮಿನಲ್ಲಿ ಜೂನ್‌ದಿಂದ ಇಲ್ಲಿಯವರೆಗೆ 188.7 ಮಿ.ಮೀ ಮಳೆಯಾಗಬೇಕಿದ್ದು ಆದರೆ 76 ಮಿ.ಮೀ ಮಳೆಯಾಗಿ ವಾಡಿಕೆಗಿಂತ ಶೇ.60 ರಷ್ಟು ಕೊರತೆಯಾಗಿದೆ. ಮತ್ತು 1,93,670 ಹೆಕ್ಟೇರ್ ಬಿತ್ತನೆ ಮಾಡಿದ ಪ್ರದೇಶದಲ್ಲಿ ನೀರಾವರಿ 46,958 ಹೆ, 1,46,712 ಹೆ ಖುಷ್ಕಿ ಪ್ರದೇಶ ಸೇರಿ ಶೇ.65 ರಷ್ಟು ಬಿತ್ತನೆ ಮಾಡಲಾಗಿದೆ. ಮಳೆ ಆಧಾರಿತ ಬೆಳೆಗಳಾದ ಮೆಕ್ಕೆಜೋಳ, ಹೈಬ್ರೀಡ್ ಜೋಳ, ಸೂರ್ಯಕಾಂತಿ, ಈರುಳ್ಳಿ, ಸಜ್ಜೆ ಹಾಗೂ ಇನ್ನಿತರೆ ಬೆಳೆಗಳು ಸೇರಿ 1,46,712 ಹೆಕ್ಟೇರ್ ಬೆಳೆಗಳಲ್ಲಿ 1,25,717 ಹೆಕ್ಟೇರ್ ಪ್ರದೇಶದಲ್ಲಿನ ಬೆಳೆಗಳು ತೇವಾಂಶದ ಕೊರತೆಯಿಂದ ಬಾಡಿ, ಬೆಳೆ ಕುಂಠಿತವಾಗಿದ್ದು ಇಳುವರಿಯ ಮೇಲೆ ಸಂಪೂರ್ಣ ಪರಿಣಾಮ ಬೀರಿದೆ.

ಜಿಲ್ಲೆಯಲ್ಲಿ ಹೆಚ್ಚು ಮಳೆ ಕೊರತೆಯು ಹೊಸಪೇಟೆ ತಾಲ್ಲೂಕಿನಲ್ಲಿ ಶೇ 77 ರಷ್ಟು ಮತ್ತು ಕೊಟ್ಟೂರಿನಲ್ಲಿ ಶೇ 44 ರಷ್ಟು ಮಳೆ ಕೊರತೆ ಉಂಟಾಗಿದೆ. ಅನಾವೃಷ್ಟಿಯಿಂದ ಕೂಡ್ಲಿಗಿ ತಾಲ್ಲೂಕಿನಲ್ಲಿ 34,640 ಹೆಕ್ಟೇರ್ ಬೆಳೆ ಹಾನಿಯಾಗಿದೆ. ಮಳೆ ಕೊರತೆಯಿಂದ ಬಿತ್ತನೆ ಹೆಚ್ಚು ಮಾಡದ ಹೊಸಪೇಟೆ ತಾಲೂಕಿನಲ್ಲಿ 2432 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ.

ಬೆಳೆ ವಿಮೆ. ಜಿಲ್ಲೆಯಲ್ಲಿ ಇಲ್ಲಿಯವರೆಗೆ 1,43,903 ರೈತರು ಬೆಳೆ ವಿಮೆಗೆ ನೊಂದಾಯಿಸದಿರುವವರು, ಬೆಳೆ ವಿಮೆಗೆ ನೊಂದಾಯಿಸಲು ಆಗಸ್ಟ್ 15 ರ ವರೆಗೆ ಅವಕಾಶ ಇದ್ದು, ರೈತರು ಬೆಳೆ ವಿಮೆ ಸೌಲಭ್ಯ ಪಡೆಯಲು ನೊಂದಾಯಿಸಲು ರೈತರಿಗೆ ತಿಳಿಸಿದರು.

ಆರಂಭದಲ್ಲಿ ಕೂಡ್ಲಿಗಿ ತಾಲೂಕಿನ ಮೊರಬ ಗ್ರಾಮ: ಸಚಿವರು ಮೊರಬ ಗ್ರಾಮದ ಶಾಂತಲಿಂಗಮ್ಮ ಅವರ ಜಮೀನಿಗೆ ಭೇಟಿ ನೀಡಿ ವೀಕ್ಷಣೆ ಮಾಡಿದರು. ಶಾಂತಲಿಂಗಮ್ಮ ಅವರು ಒಟ್ಟು 15 ಎಕರೆ ಜಮೀನು ಹೊಂದಿದ್ದು, ಸಕಾಲಕ್ಕೆ ಮಳೆ ಬಾರದ ಕಾರಣ ಕೇವಲ 5 ಎಕರೆಯಲ್ಲಿ ಮಾತ್ರ ಬಿತ್ತನೆ ಮಾಡಿದ್ದಾರೆ. ಬಿತ್ತನೆ ಮಾಡಿದ ಬೆಳೆಯೂ ಈಗ ಮಳೆ ಬಂದರು ಇಳುವರಿ ಬರುವುದು ಸಾಧ್ಯವಿಲ್ಲ. ಬೀಜ ಹಾಗೂ ರಸಗೊಬ್ಬರಗಳ ಬೆಲೆ ವಿಪರೀತ ಹೆಚ್ಚಾಗಿದ್ದು, ಒಂದು ಚೀಲಕ್ಕೆ ರೂ.2,000 ವರೆಗೆ ದುಬಾರಿಯಾಗಿದೆ. ಕೃಷಿ ವೆಚ್ಚ ಹಾಗೂ ಬೀಜ–ಗೊಬ್ಬರ ಖರೀದಿಸಲು ತಮ್ಮಲ್ಲಿದ್ದ ಬಂಗಾರ–ಬೆಳ್ಳಿಯ ಆಭರಣಗಳನ್ನು ಅಡವಿಟ್ಟು ಜೀವನ ನಡೆಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ರೈತರು ತಮ್ಮ ಅಳಲನ್ನು ತೋಡಿಕೊಂಡರು. ಜೊತೆಗೆ, ಕೂಡ್ಲಿಗಿ ತಾಲೂಕನ್ನು ತಕ್ಷಣವೇ ಬರಪೀಡಿತ ಪ್ರದೇಶವೆಂದು ಘೋಷಿಸಬೇಕೆಂದು ಶಾಸಕರಾದ ಡಾ.ಎನ್.ಟಿ.ಶ್ರೀನಿವಾಸ್ ಮನವಿ ಮಾಡಿದರು.

ಕೊಟ್ಟೂರು ತಾಲೂಕಿನ ಗಜಾಪುರ ಗ್ರಾಮದ ಸಿದ್ದಪ್ಪ ಎಂಬುವರ 6 ಎಕರೆ ಮೆಕ್ಕೆಜೋಳ ಜಮೀನು ಸಂಪೂರ್ಣ ಬರಕ್ಕೆ ತುತ್ತಾಗಿರುವುದನ್ನು ಸಚಿವರು ಪರಿಶೀಲಿಸಿದರು. ಬೆಳೆ ನಷ್ಟ ಪರಿಹಾರ ಹಾಗೂ ವಿಮಾ ಯೋಜನೆಯಡಿ ಸೂಕ್ತ ನೆರವು ನೀಡುವ ಭರವಸೆ ನೀಡಿದರು.

ಸಾಲ ಸೋಲ ಮಾಡಿ ಎಕರೆಗೆ ರೂ.15,000ಕ್ಕೂ ಹೆಚ್ಚು ವೆಚ್ಚ ಮಾಡಿದ ರೈತರ ಬೆಳೆ ಸಂಪೂರ್ಣ ನಾಶವಾಗಿದೆ. ಬಿತ್ತನೆ ಪ್ರದೇಶದಲ್ಲಿ ಗಾಳಿಯಂತ್ರ (ವಿಂಡ್ ಫ್ಯಾನ್), ಸೋಲಾರ್ ಪ್ಯಾನಲ್‌ಗಳು ಮತ್ತು ಹೈ–ಟೆನ್ಷನ್ ವಿದ್ಯುತ್ ಮಾರ್ಗಗಳು ಹೆಚ್ಚಾಗಿ ವಿಸ್ತರಿಸುತ್ತಿದ್ದು, ರೈತರು ಕೇವಲ ಕೃಷಿಯನ್ನೇ ನಂಬಿ ಜೀವಿಸಲು ಜಾಗವಿಲ್ಲದಂತಾಗಿದೆ ಎಂದ ಅವರು, ಸರ್ಕಾರದ ಯೋಜನೆಗಳ ಮೂಲಕ 74 ಕೆರೆಗಳಿಗೆ ನೀರು ತುಂಬಿಸುವ ಕೆಲಸವಾಗುತ್ತಿದ್ದು, ಅದು ಕೇವಲ ಅಚ್ಚುಕಟ್ಟು ಪ್ರದೇಶಗಳಿಗೆ ಮಾತ್ರ ಉಪಯುಕ್ತವಾಗುತ್ತಿದೆ. ಮಳೆ ಆಶ್ರಿತ ಒಣಭೂಮಿ ನಂಬಿರುವ ರೈತರಿಗೆ ಇದ–ರಿಂದ ಯಾವುದೇ ಅನುಕೂಲವಾಗುತ್ತಿಲ್ಲ ಎಂದು ಶಾಸಕರು ಅಸಮಾಧಾನ ವ್ಯಕ್ತಪಡಿಸಿದರು.

ಅದಷ್ಟೇ ಅಲ್ಲದೇ ಪ್ರಸ್ತುತ ಬರ ಆವರಿಸಿದ್ದು, ರೈತರು ಇನ್ನಿಲ್ಲದ ಸಂಕಷ್ಟಗಳ ಎದುರಿಸುತ್ತಿದ್ದಾರೆ. ಇಂಥಹ ಕಷ್ಟದ ಸಮಯದಲ್ಲಿ ಬ್ಯಾಂಕ್‌ಗಳಿಂದ ಸಾಲ ಮರುಪಾವತಿ ಮಾಡುವಂತೆ ರೈತರಿಗೆ ನೋಟೀಸ್ ನೀಡುತ್ತಿರುವ ಕುರಿತು ಸಚಿವರ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು ಈ ವಿಚಾರವನ್ನು ಸರ್ಕಾರದ ಗಮನಕ್ಕೆ ತರಲಾಗುವುದು. ರೈತರಿಗೆ ತೊಂದರೆಯಾಗದಂತೆ ಸೂಕ್ತ ತೀರ್ಮಾನ ಕೈಗೊಳ್ಳಲು ಮುಖ್ಯಮಂತ್ರಿಗಳಿಗೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಮಾಹಿತಿ ನೀಡಿದರು.

ಹರಪನಹಳ್ಳಿ ಹರಾಳು ಗುಡ್ಡಪ್ಪನವರ ಈರುಳ್ಳಿ, ನಿಚ್ಚಾಪುರದಲ್ಲಿ ಹಲಗೂರು ನಿಂಗಪ್ಪ ನ ಜಮೀನಿನಲ್ಲಿ ಹಾನಿಯಾದ ಮೆಕ್ಕೆಜೋಳದ ವೀಕ್ಷಣೆ ಮಾಡಿದರು.

ಈ ವೇಳೆ ಕೂಡ್ಲಿಗಿ ಶಾಸಕ ಡಾ.ಎನ್.ಟಿ.ಶ್ರೀನಿವಾಸ್, ಹರಪನಹಳ್ಳಿ ಶಾಸಕಿ ಲತಾ ಮಲ್ಲಿಕಾರ್ಜುನ, ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ, ಜಿಲ್ಲಾ ಪಂಚಾಯತ್ ಸಿಇಓ ನೊಂಗ್ಜಾಯ್ ಮಹ್ಮದ್ ಅಲಿ ಅಕ್ರಮ್ ಷಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜಾಹ್ನವಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್ ಸೇರಿದಂತೆ ವಿವಿಧ ಇಲಾಖೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

## ಭಾರತ್ ಜೋಡೋ ಕೊಡಗು ಯುವ ಸಂಘ ಸ್ಥಾಪನೆಗೆ ಜಿಲ್ಲಾಧಿಕಾರಿ ಸೋಮಶೇಖರ್ ಸೂಚನೆ





ಮಡಿಕೇರಿ: ಭಾರತ ಜೋಡೋ ಯುವ ಸಂಘ ಸ್ಥಾಪನೆಗೆ ಅಗತ್ಯ ಕ್ರಮವಹಿಸುವಂತೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಎಸ್. ಜೆ.ಸೋಮಶೇಖರ್ ಅವರು ನಿರ್ದೇಶನ ನೀಡಿದ್ದಾರೆ. ನಗರದ ಜಿಲ್ಲಾಧಿಕಾರಿ ಅವರ ಕಚೇರಿ ಸಭಾಂಗಣದಲ್ಲಿ ಭಾರತ ಜೋಡೋ ಯುವ ಸಂಘ ಸ್ಥಾಪನೆ ಸಂಬಂಧ ಮಂಗಳವಾರ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಯುವ ಜನರಲ್ಲಿ ಕ್ರೀಡೆ, ಸಂಸ್ಕೃತಿ, ವೈಜ್ಞಾನಿಕ ಮನೋಭಾವ ಹಾಗೂ ಸಮುದಾಯಿಕ, ಸಾಮಾಜಿಕ ಸಾಮರಸ್ಯವನ್ನು ಉತ್ತೇಜಿಸುವಲ್ಲಿ ಸರ್ಕಾರ ಭಾರತ ಜೋಡೋ ಯುವ ಸಂಘಗಳನ್ನು ಸ್ಥಾಪಿಸಲು ಉದ್ದೇಶಿಸಿದ್ದು, ಆ ನಿಟ್ಟಿನಲ್ಲಿ ಪಂಚಾಯತ್ ರಾಜ್ ಹಾಗೂ ನಗರಾಭಿವೃದ್ಧಿ, ಪೌರಾಡಳಿತ ಇಲಾಖೆ ಅಧಿಕಾರಿಗಳು ತುರ್ತು ಕ್ರಮವಹಿಸುವಂತೆ ಸೂಚಿಸಿದರು. ಜಿಲ್ಲೆಯಲ್ಲಿ ಪ್ರತೀ ಗ್ರಾ.ಪಂ.ವ್ಯಾಪ್ತಿಯಲ್ಲಿ ತಲಾ ಒಂದು ಭಾರತ ಜೋಡೋ ಯುವ ಸಂಘ ಸ್ಥಾಪಿಸಬೇಕಿದೆ. ಪ್ರತಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಸರಾಸರಿ 4 ಸಾವಿರ ಜನಸಂಖ್ಯೆಗೆ ಒಂದು ಸಂಘ, ಪ್ರತಿ ಪುರಸಭೆಯಲ್ಲಿ ಸರಾಸರಿ 6 ಸಾವಿರ ಜನಸಂಖ್ಯೆಗೆ ಒಂದು ಸಂಘ, ನಗರಸಭೆ ವ್ಯಾಪ್ತಿಯಲ್ಲಿ ಸರಾಸರಿ 8 ಸಾವಿರ ಜನಸಂಖ್ಯೆಗೆ ಒಂದು ಸಂಘ ಸ್ಥಾಪಿಸಬೇಕಿದೆ ಎಂದು ಜಿಲ್ಲಾಧಿಕಾರಿ ವಿವರಿಸಿದರು. ಭಾರತ ಜೋಡೋ ಯುವ ಸಂಘಕ್ಕೆ ಪ್ರತೀ ಸಂಘಕ್ಕೆ ವರ್ಷಕ್ಕೆ ತಲಾ 10 ಲಕ್ಷ ರೂ. ಸರ್ಕಾರದಿಂದ ಅನುದಾನ ಬಿಡುಗಡೆಯಾಗಿದೆ ಎಂದು ಅವರು ಹೇಳಿದರು. ಪ್ರತೀ ಸಂಘಕ್ಕೆ ಒಬ್ಬ ತರಬೇತಿದಾರರ ಗೌರವಧನಕ್ಕೆ ವಾರ್ಷಿಕ 24 ಸಾವಿರ ರೂ. ಭರಿಸಲಾಗುತ್ತದೆ. ಆ ನಿಟ್ಟಿನಲ್ಲಿ ಸರ್ಕಾರದ ಮಾರ್ಗಸೂಚಿ ಕಡ್ಡಾಯವಾಗಿ ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ಅವರು ನಿರ್ದೇಶನ ನೀಡಿದರು. ವಿಕಾಸಶೀಲ ಮತ್ತು ಸೌಹಾರ್ದಶೀಲ ಕರ್ನಾಟಕ ನಿರ್ಮಾಣಕ್ಕಾಗಿ ಪ್ರತೀ ಗ್ರಾ.ಪಂ.ಮತ್ತು ನಗರ ವಾರ್ಡ್‌ಗಳಲ್ಲಿ ಯುವ ವೇದಿಕೆಯನ್ನು ಸ್ಥಾಪಿಸುವುದು, ಯುವಜನರಲ್ಲಿ ನಾಯಕತ್ವ ಗುಣಗಳು, ಸಾಮಾಜಿಕ ಹೊಣೆಗಾರಿಕೆ ಮತ್ತು ನಾಗರಿಕ ಪ್ರಜ್ಞೆ ಮೂಡಿಸುವುದು ಯೋಜನೆಯ ದೂರದೃಷ್ಠಿ ಉದ್ದೇಶವಾಗಿದೆಯೆಂದರು.


## ವಿರಾಜಪೇಟೆ ಶಾಸಕರನ್ನು ನಿವಾಸದಲ್ಲಿ ಭೇಟಿಯಾದ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್



ವಿರಾಜಪೇಟೆ :ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರು ಹಾಗೂ ವಿಧಾನಪರಿಷತ್ ಸದಸ್ಯರಾದ ಬಿ.ಕೆ ಹರಿಪ್ರಸಾದ್ ರವರು ಮಾನ್ಯ ವಿರಾಜಪೇಟೆ ಶಾಸಕರು ಹಾಗೂ ವಿಧಾನಸಭೆಯ ಉಪ ಸಭಾಪತಿಯಾದ ಅಜ್ಜಿಕುಟ್ಟಿರ ಎಸ್. ಪೊನ್ನಣ್ಣ ಅವರನ್ನು ಬೆಂಗಳೂರು ನಿವಾಸದಲ್ಲಿ ವೈಯುಕ್ತಿಕವಾಗಿ ಭೇಟಿ ಮಾಡಿದರು. ಕೆಪಿಸಿಸಿ ಅಧ್ಯಕ್ಷರನ್ನು ಆತ್ಮೀಯವಾಗಿ ಬರಮಾಡಿಕೊಂಡ ಬಳಿಕ ಪ್ರಸಕ್ತ ರಾಜಕೀಯ ವಿಷಯಗಳು ಹಾಗೂ ಕೊಡಗು ಜಿಲ್ಲೆಯ ಏಳಿಗೆಯ ಬಗ್ಗೆ ಚರ್ಚಿಸಿದರು.

## ಬರದ ಮಾಹಿತಿ ತಪ್ಪಾಗಬಾರದು; ಗುತ್ತಿಗೆ ಕಾರ್ಮಿಕರಿಗೆ ಸೌಲಭ್ಯ ಒದಗಿಸಲು ಆಗ್ರಹಿಸಿ ಪ್ರತಿಭಟನೆ


### ಶಾಸಕ ಎಚ್.ವಿ. ವೆಂಕಟೇಶ್ ಖಡಕ್ ಎಚ್ಚರಿಕೆ



ಪಾವಗಡ : ಬರ ಪರಿಸ್ಥಿತಿ ಕುರಿತು ಸರ್ಕಾರಕ್ಕೆ ನಿಖರ ಮಾಹಿತಿ ಸಲ್ಲಿಸಬೇಕು. ಸಾರ್ವಜನಿಕರಿಗೆ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರು ಮತ್ತು ಮೇವು ಕೊರತೆಯಾಗದಂತೆ ಅಧಿಕಾರಿಗಳು ತುರ್ತು ಕ್ರಮ ಕೈಗೊಳ್ಳಬೇಕು ಎಂದು ಶಾಸಕ ಎಚ್.ವಿ. ವೆಂಕಟೇಶ್ ಅಧಿಕಾರಿಗಳಿಗೆ ಸೂಚಿಸಿದರು.

ಪಟ್ಟಣದಲ್ಲಿ ನಡೆದ ಟಾಸ್ಕ್ ಫೋರ್ಸ್ ಸಭೆಯಲ್ಲಿ ಮಾತನಾಡಿದ ಅವರು, ಪಾವಗಡದಲ್ಲಿ ಸುರಿದ ಮಳೆಯ ಕುರಿತು ಮೇಲಾಧಿಕಾರಿಗಳಿಗೆ ತಪ್ಪು ಮಾಹಿತಿ ರವಾನೆಯಾಗಿರುವುದು ಗಂಭೀರ ವಿಚಾರವಾಗಿದ್ದು, ಇಂತಹ ತಪ್ಪುಗಳು ಮರುಕಳಿಸದಂತೆ ಎಚ್ಚರಿ–ಕೆ ವಹಿಸಬೇಕು ಎಂದರು. ತುಂಗಭದ್ರಾ ಯೋಜನೆಯಿಂದ ಕುಡಿಯುವ ನೀರಿನ ಸಮಸ್ಯೆ ಕಡಿಮೆಯಾಗಿದ್ದರೂ, ಮಳೆಯ ಕೊರತೆಯಿಂದ ಬಿತ್ತನೆಯಾದ ಬೆಳೆಗಳು ಸಮರ್ಪಕವಾಗಿ ಮೊಳಕೆಯಾಗದೆ ರೈತರು ಸಂಕಷ್ಟದಲ್ಲಿದ್ದಾರೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿ–ದರು. ರೈತರಿಗೆ ನಿರಂತರ ವಿದ್ಯುತ್ ಪೂರೈಕೆ ಖಚಿತಪಡಿಸುವಂತೆ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದ ಅವರು, ನಿರ್ಲಕ್ಷ್ಯ ಕಂಡುಬಂದರೆ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು.

ತಹಸೀಲ್ದಾರ್ ವೈ. ರವಿ ಮಾತನಾಡಿ, ವಸತಿ ನಿಲಯಗಳಿಗೆ ಪೂರೈಕೆಯಾಗುವ ಕುಡಿಯುವ ನೀರನ್ನು ಕಡ್ಡಾಯವಾಗಿ ಪರೀಕ್ಷಿಸಿ, ಸುರಕ್ಷಿತವೆಂದು ದೃಢಪಟ್ಟ ಬಳಿಕವೇ ಬಳಸಬೇಕು ಎಂದು ಸೂಚಿಸಿದರು. ರಸಗೊಬ್ಬರ ಕೊರತೆ–ಯಾಗದಂತೆ ಕ್ರಮ ಕೈಗೊಳ್ಳಬೇಕು ಹಾಗೂ ಉಪಮುಖ್ಯಮಂತ್ರಿಗಳ ಬರ ಅಧ್ಯಯನ ಸಭೆಗೆ ಎಲ್ಲ ಅಧಿಕಾರಿಗಳು ಸಂಪೂರ್ಣ ಮಾಹಿತಿಯೊಂದಿಗೆ ಹಾಜರಾಗಬೇಕು ಎಂದರು.



ಸಂಡೂರು : ಪಟ್ಟಣದ ಹೊರ ವಲಯದಲ್ಲಿನ ಬಳ್ಳಾರಿ ಶಾಖೋತ್ಪನ್ನ ವಿದ್ಯುತ್ ಕೇಂದ್ರದಲ್ಲಿ ನಿರಂತರವಾಗಿ ಸೇವೆ ಸಲ್ಲಿಸುವ ಗುತ್ತಿಗೆ ಕಾರ್ಮಿಕರಿಗೆ ಸಾರಿಗೆ ವ್ಯವಸ್ಥೆ, ಅಪಘಾತದಲ್ಲಿ ಮೃತಪಟ್ಟ ಕಾರ್ಮಿಕರಿಗೆ ಸೂಕ್ತ ಪರಿಹಾರ ನೀಡುವುದು, ಕಾರ್ಮಿಕರಿಗೆ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆ ಒತ್ತಾಯಿಸಿ ನೂರಾರು ಕಾರ್ಮಿಕರು ಬಿಟಿಪಿಎಸ್ ಘಟಕದ ಮುಖ್ಯ ದ್ವಾರದ ಬಳಿ ಪ್ರತಿಭಟನೆ ನಡೆಸಿದರು.

ಬಿಟಿಪಿಎಸ್ ಗುತ್ತಿಗೆ ಕಾರ್ಮಿಕರ ಸಂಘದ ಅಧ್ಯಕ್ಷ ಬಸವರಾಜ್ ಮಾತನಾಡಿ, 'ಬಳ್ಳಾರಿ ಶಾಖೋತ್ಪನ್ನ ವಿದ್ಯುತ್ ಕೇಂದ್ರದಲ್ಲಿ ನಿರಂತರವಾಗಿ ಸೇವೆ ಸಲ್ಲಿಸುವ ಗುತ್ತಿಗೆ ಕಾರ್ಮಿಕರಿಗೆ ಸಾರಿಗೆ ವ್ಯವಸ್ಥೆ, ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆ ಒತ್ತಾಯಿಸಿ ಹಲವಾರು ಬಾರಿ ಘಟಕದ ಕಾರ್ಯನಿರ್ವಾಹಕ ನಿರ್ದೇಶಕರಿಗೆ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ ಬಳ್ಳಾರಿ ಸೇರಿದಂತೆ ಇತರ ಸ್ಥಳಗಳಿಂದ ಆಗಮಿಸುವ ಕಾರ್ಮಿಕರಿಗೆ ಘಟಕದ ವತಿಯಿಂದ ಸೂಕ್ತ ಸಾರಿಗೆ ವ್ಯವಸ್ಥೆ ಕಲ್ಪಿಸಬೇಕು. ಈಚೆಗೆ ರಸ್ತೆ ಅಪಘಾತದಲ್ಲಿ ಮೃತಪಟ್ಟ ಕಾರ್ಮಿಕನ ಕುಟುಂಬಕ್ಕೆ ಸರ್ಕಾರವು ಅಗತ್ಯ ಪರಿಹಾರ ನೀಡಬೇಕು' ಎಂದು ಒತ್ತಾಯಿಸಿದರು.

ಬಿಟಿಪಿಎಸ್ ನಿಗಮದ ಮಾನವ ಸಂಪನ್ಮೂಲ ವಿಭಾಗದ ಮುಖ್ಯಸ್ಥ ರಾಜು ಅವರು ಕಾರ್ಮಿಕರ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ, ಮನವಿ ಸ್ವೀಕರಿಸಿ ಮಾತನಾಡಿದ ಅವರು, 'ಘಟಕದಲ್ಲಿನ ಗುತ್ತಿಗೆ ಕಾರ್ಮಿಕರ ಸಮಸ್ಯೆಗಳನ್ನು ಇತ್ಯರ್ಥ ಮಾಡಲು ಶೀಘ್ರವಾಗಿ ಅಧಿಕಾರಿಗಳ ನೇತೃತ್ವದಲ್ಲಿ ಸಭೆ ನಡೆಸಿ, ಸಮಸ್ಯೆಗಳ ಬಗ್ಗೆ ಚರ್ಚಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು' ಎಂದು ಭರವಸೆ ನೀಡಿದರು.

ನೂರಾರು ಕಾರ್ಮಿಕರು ಘಟಕದ ಮುಖ್ಯದ್ವಾರದ ಬಳಿ ಬೆಳಿಗ್ಗೆಯಿಂದ ಮಧ್ಯಾಹ್ನದವರೆಗೂ ನಿರಂತರ ಪ್ರತಿಭಟನೆ ನಡೆಸಿದರು. ಘಟಕದ ಅಧಿಕಾರಿಗಳು ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ ಮನವಿ ಸ್ವೀಕರಿಸಿದ ನಂತರ ಪ್ರತಿಭಟನೆ ಕೈ ಬಿಡಲಾಯಿತು.

ಸಂಘದ ಪ್ರಧಾನ ಕಾರ್ಯದರ್ಶಿ ಅಂಬರೀಶ್, ಮುಖಂಡರಾದ ನಾಗೇಂದ್ರ, ಯಲ್ಲಪ್ಪ, ನಾಗೇಶ್, ವೆಂಕಟರೆಡ್ಡಿ, ಗೋಪಾಲ, ಕೆಂಚಪ್ಪ, ಶಿವನಾಯಕ, ಹುಚ್ಚಮ್ಮ, ನಾಗರತ್ನ, ಶಾರದಾ, ಮಲ್ಲಮ್ಮ ವಿವಿಧ ಗ್ರಾಮಗಳ ನೂರಾರು ಕಾರ್ಮಿಕರು ಹಾಜರಿದ್ದರು.

ಅನಂತ ಜನಶಕ್ತಿ



# ಕರ್ನಾಟಕ ಹೈಕೋರ್ಟ್‌ಗೆ ಆರು ಮಂದಿ ಹೆಚ್ಚುವರಿ ನ್ಯಾಯಮೂರ್ತಿಗಳ ನೇಮಕ



ನವದೆಹಲಿ: ಕರ್ನಾಟಕ ಹೈಕೋರ್ಟ್‌ಗೆ ಆರು ಮಂದಿ ಹೆಚ್ಚುವರಿ ನ್ಯಾಯಮೂರ್ತಿಗಳನ್ನು ನೇಮಕ ಮಾಡಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಶುಕ್ರವಾರ ಅಧಿಸೂಚನೆ ಹೊರಡಿಸಿದ್ದಾರೆ. ಸಂವಿಧಾನದ 224(1)ನೇ ವಿಧಿಯಡಿ ಈ ನೇಮಕ ಮಾಡಲಾಗಿದ್ದು, ಅಧಿಕಾರ ಸ್ವೀಕರಿಸಿದ ದಿನಾಂಕದಿಂದ ಎರಡು ವರ್ಷಗಳ ಅವಧಿಗೆ ಅವರು ಹೆಚ್ಚುವರಿ ನ್ಯಾಯಮೂರ್ತಿಗಳಾಗಿ ಕಾರ್ಯ ನಿರ್ವಹಿಸಲಿದ್ದಾರೆ.

ನೇಮಕಗೊಂಡವರಲ್ಲಿ ರಾಘವೇಂದ್ರ ಸೀತಾರಾಮ ಶ್ರೀವತ್ಸ, ಹೇಮಾ ಕುಲಕರ್ಣಿ, ಸುಬ್ರಮಣ್ಯ ರಂಗರಾವ್, ತಡಗವಾಡಿ ಪ್ರಕಾಶ್ ವಿವೇಕಾನಂದ, ಬಕ್ಕೇಶ್ವರ ಪ್ರಮೋದ್ ಹಾಗೂ ಹೊಂಬೆ ಗೌಡ ಶಾಂತಿ ಭೂಷಣ್ ಸೇರಿದ್ದಾರೆ.

ಈ ಆರು ಮಂದಿಯನ್ನು ಕರ್ನಾಟಕ ಹೈಕೋರ್ಟ್‌ನ ಹೆಚ್ಚುವರಿ ನ್ಯಾಯಮೂರ್ತಿಗಳನ್ನಾಗಿ ನೇಮಕ ಮಾಡಲಾಗಿದೆ ಎಂದು ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವಾಲಯ ಅಧಿಸೂಚನೆಯಲ್ಲಿ ತಿಳಿಸಿದೆ.

ಇದಕ್ಕೂ ಮುನ್ನ ಇವರ ಹೆಸರುಗಳನ್ನು ಸುಪ್ರೀಂ ಕೋರ್ಟ್ ಕೊಲಿಜಿಯಂ ಶಿಫಾರಸು ಮಾಡಿತ್ತು. ಕೇಂದ್ರ ಸರ್ಕಾರದ ಅನುಮೋದನೆಯ ಬಳಿಕ ರಾಷ್ಟ್ರಪತಿ ಅಧಿಕೃತ ನೇಮಕ ಆದೇಶ ಹೊರಡಿಸಿದ್ದಾರೆ.

# ಹೀರದ ಸೂಗಮ್ಮ ಶಾಲೆ ಶತಮಾನೋತ್ಸವ ನಗರದಲ್ಲಿ ಭವ್ಯ ಮೆರವಣಿಗೆ



ಬಳ್ಳಾರಿ, ಆ. 7:ಅನಂತ ಜನಶಕ್ತಿ ನ್ಯೂಸ್

ಬಳ್ಳಾರಿಯ ವೀರಶೈವ ವಿದ್ಯಾವರ್ಧಕ ಸಂಘದ ಪ್ರಥಮ ಶಿಕ್ಷಣ ಸಂಸ್ಥೆಯಾದ ಹೀರದ ಸೂಗಮ್ಮ ಶಾಲೆಯ ಶತಮಾನೋತ್ಸವದ ಅಂಗವಾಗಿ ಶುಕ್ರವಾರ ನಗರದಲ್ಲಿ ಭವ್ಯ ಹಾಗೂ ಆಕರ್ಷಕ ಮೆರವಣಿಗೆ ನಡೆಯಿತು.

ನಗರದ ಮರಿಸ್ವಾಮಿ ಮಠದಿಂದ ಆರಂಭವಾದ ಮೆರವಣಿಗೆಯಲ್ಲಿ ಹೀರದ ಸೂಗಮ್ಮ ಅವರ ಸ್ಥಬ್ಧಚಿತ್ರವನ್ನು ವಿಶೇಷವಾಗಿ ಅಲಂಕರಿಸಲಾಗಿತ್ತು. ಡೊಳ್ಳು, ವೀರಗಾಸೆ, ತಮಟೆ, ಡೋಲು ಹಾಗೂ ಅಲಂಕಾರಿಕ ದೀಪಗಳೊಂದಿಗೆ ಮೆರವಣಿಗೆ ನಗರದ ಪ್ರಮುಖ ಬೀದಿಗಳಲ್ಲಿ ಸಾಗಿದ್ದು ಸಾರ್ವಜನಿಕರ ಗಮನ ಸೆಳೆಯಿತು.

ಕಲ್ಯಾಣ ಮಠದ ಪೂಜ್ಯ ಶ್ರೀಗಳು ಮೆರವಣಿಗೆಗೆ ಚಾಲನೆ ನೀಡಿದರು. ವೀರಶೈವ ವಿದ್ಯಾವರ್ಧಕ ಸಂಘದ ಪದಾಧಿಕಾರಿಗಳು, ಅಜೀವ ಸದಸ್ಯರು, ವೀರಶೈವ ಸಮಾಜದ ಮುಖಂಡರು, ಶಾಲೆಯ ಹಳೆಯ ವಿದ್ಯಾರ್ಥಿಗಳು, ಸಂಘದ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಉತ್ಸಾಹದಿಂದ ಭಾಗವಹಿಸಿದರು.

ಮೆರವಣಿಗೆ ದೊಡ್ಡ ಮಾರುಕಟ್ಟೆ, ಬ್ರೂಸ್‌ಪೇಟೆ, ತೇರುಬೀದಿ, ಜೈನ ಮಾರುಕಟ್ಟೆ, ಗವಿಯಪ್ಪ ವೃತ್ತದ ಮೂಲಕ ಸಂಚರಿಸಿ ಹೀರದ ಸೂಗಮ್ಮ ಶಾಲೆಯ ಆವರಣಕ್ಕೆ ತಲುಪಿತು.

ಶತಮಾನೋತ್ಸವದ ಅಂಗವಾಗಿ ಆಯೋಜಿಸಲಾದ ಈ ಮೆರವಣಿಗೆಗೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು, ಶಾಲೆಯ ಶತಮಾನೋತ್ಸವ ಕಾರ್ಯಕ್ರಮಗಳಿಗೆ ವಿಶೇಷ ಮೆರುಗು ನೀಡಿತು.

# ಹನೂರಿನಲ್ಲಿ ಕೆ.ಎಸ್.ಆರ್.ಟಿ.ಸಿ.ನೂತನ ಬಸ್ ಘಟಕ ನಿರ್ಮಾಣಕ್ಕೆ ಶಂಕುಸ್ಥಾಪನೆ



ಚಾಮರಾಜನಗರ.ಆ.8 ಹನೂರು ತಾಲೂಕು ಕೇಂದ್ರದಲ್ಲಿ ಕೆ.ಎಸ್.ಆರ್.ಟಿ.ಸಿ ಯ ನೂತನ ಬಸ್ ಘಟಕ ನಿರ್ಮಾಣ ಕಾರ್ಯ–ಕ್ಕೆ ಸಚಿವರಾದ ಸಿ. ಪುಟ್ಟರಂಗಶೆಟ್ಟಿ ಅವರು ಇಂದು ಗುದ್ದಲಿ ಪೂಜೆ ನೆರವೇರಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಹನೂರು ಭಾಗದಲ್ಲಿ ಸುಸಜ್ಜಿತ ಬಸ್ ಘಟಕ ನಿರ್ಮಾಣವಾದ ನಂತರ ಗ್ರಾಮೀಣ ಹಾಗೂ ಕಾಡಂಚಿನ ಪ್ರದೇಶಗಳಿಗೆ ಹೆಚ್ಚುವರಿ ಬಸ್ ಸಂಚಾರ ಕಲ್ಪಿಸಲು ಸಾರಿಗೆ ನಿಗಮಕ್ಕೆ ಅನುಕೂಲವಾಗಲಿದೆ ಎಂದರು.

ಸ್ಥಳೀಯ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳಿಗೆ ಸುಲಭವಾಗಿ ಪ್ರಯಾಣಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

"ಹೊಸ ಘಟಕದಲ್ಲಿ ವಾಹನ ದುರಸ್ತಿ ಅಂಕಣ, ವಾಷಿಂಗ್ ರ್ಯಾಂಪ್ ಮತ್ತು ಇಂಧನ ತುಂಬಿಸುವ ಟ್ಯಾಂಕ್ ವ್ಯವಸ್ಥೆ ಇರುವುದರಿಂದ ಬಸ್‌ಗಳ ನಿರ್ವಹಣೆ ಇಲ್ಲೇ ಆಗುತ್ತದೆ. ಇದರಿಂದ ಬಸ್ ರದ್ದಾಗುವ ಸಾಧ್ಯತೆ ಕಡಿಮೆಯಾಗುತ್ತದೆ ಎಂದರು.

ಶಾಸಕ ಎಂ. ಆರ್. ಮಂಜುನಾಥ್ ಮಾತನಾಡಿ , ಹನೂರು ತಾಲೂಕಿನ ಜನರ ಬಹುದಿನದ ಕನಸು ಇಂದು ನನಸಾಗಿದೆ. ಈ ಘಟಕದಿಂದ 170ಕ್ಕೂ ಹೆಚ್ಚು ಗ್ರಾಮಗಳಿಗೆ ಸಂಪರ್ಕ ಸಿಗಲಿದೆ. ಶಾಲಾ–ಕಾಲೇಜು ವಿದ್ಯಾರ್ಥಿಗಳು, ರೈತರು ಮತ್ತು ಕಾರ್ಮಿಕರಿಗೆ ಹೆಚ್ಚಿನ ಅನುಕೂಲವಾಗುತ್ತದೆ" ಎಂದು ಹೇಳಿದರು.






# ಮಹಿಳಾ ಸುರಕ್ಷತೆಗೆ ಜಾಗೃತಿ ಅಗತ್ಯ: ನಾಗಲಕ್ಷ್ಮಿ ಚೌಧರಿ



ದಾವಣಗೆರೆ : ಪ್ರತಿಯೊಬ್ಬರ ಜೀವನದಲ್ಲೂ ಏಳು–ಬೀಳುಗಳು ಸಹಜ. ಯಾವುದೇ ಸಂದರ್ಭದಲ್ಲೂ ಧೈರ್ಯ ಕಳೆದುಕೊಳ್ಳದೆ, ಆರ್ಥಿಕ ಸ್ವಾವಲಂಬನೆ ಸಾಧಿಸಿ ಗೌರವಯುತ ಜೀವನ ಮಹಿಳೆಯರು ನಡೆಸಬೇಕು. ಸೈಬರ್ ಅಪರಾಧಗಳು, ಸಾಮಾಜಿಕ ಜಾಲತಾಣಗಳ ನಕಲಿ ಪ್ರೇಮ ಜಾಲ ಮತ್ತು ಬ್ಲ್ಯಾಕ್‌ಮೇಲ್ ವಿರುದ್ಧ ಯುವತಿಯರು ಮತ್ತು ವಿದ್ಯಾರ್ಥಿನಿಯರು ಅತ್ಯಂತ ಎಚ್ಚರಿಕೆಯಿಂದ ಇರಬೇಕೆಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ. ನಾಗಲಕ್ಷ್ಮಿ ಚೌಧರಿ ಅವರು ಕರೆ ನೀಡಿದರು.

ಅವರು ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ , ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಜಿಲ್ಲಾಡಳಿತ ಕಚೇರಿ ಆವರಣದಲ್ಲಿರುವ ತುಂಗಭದ್ರಾ ಸಭಾಂಗಣದಲ್ಲಿ ಏರ್ಪಡಿಸಿದ್ದ ವಿದ್ಯಾರ್ಥಿಗಳೊಂದಿಗೆ ಸಂವಾದ ಮತ್ತು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರತಿಯೊಬ್ಬ ಮಹಿಳೆಯೂ ಈ ನಾಡಿನ ಶಕ್ತಿ ಮತ್ತು ಗೌರವದ ಸಂಕೇತವಾಗಿದ್ದಾರೆ, ಭಾರತೀಯ ಸಂಸ್ಕೃತಿಯಲ್ಲಿ ಮಹಿಳೆಗೆ ದೇವತೆಯ ಸ್ಥಾನ ನೀಡಲಾಗಿದೆ. ಆದರೆ, ವಾಸ್ತವದಲ್ಲಿ ಮಹಿಳೆಯರಿಗೆ ಹಕ್ಕುಗಳು ಮತ್ತು ಗೌರವ ಸಿಗದಿದ್ದಲ್ಲಿ, ಅದನ್ನು ಧೈರ್ಯವಾಗಿ ಹೋರಾಡಿ ಪಡೆದುಕೊಳ್ಳುವ ಶಕ್ತಿಯನ್ನು ಹೆಣ್ಣುಮಕ್ಕಳು ಬೆಳೆಸಿಕೊಳ್ಳಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಇನ್‌ಸ್ಟಾಗ್ರಾಮ್, ಫೇಸ್‌ಬುಕ್ ಹಾಗೂ ಇತರ ಆಪ್‌ಗಳ ಮೂಲಕ ಅಪರಿಚಿತರ ಜೊತೆ ಸ್ನೇಹ ಬೆಳೆಸುವಾಗ ವಿದ್ಯಾರ್ಥಿನಿಯರು ಜಾಗರೂಕರಾಗಿರಬೇಕು. ಆನ್‌ಲೈನ್‌ನಲ್ಲಿ ಅಪರಿಚಿತರ ಪ್ರೇಮ ಬಲೆಗೆ ಬಿದ್ದು ವಂಚನೆ, ಮಾನವ ಕಳ್ಳಸಾಗಾಣಿಕೆ ಹಾಗೂ ಶೋಷಣೆಗೆ ಒಳಗಾದ ಅನೇಕ ನೈಜ ಘಟನೆಗಳನ್ನು ವಿದ್ಯಾರ್ಥಿನಿಯರ ಗಮನಕ್ಕೆ ತಂದರು.

ಖಾಸಗಿ ವಿಡಿಯೋಗಳು ಮತ್ತು ಆನ್‌ಲೈನ್ ಬೆದರಿಕೆಗಳಿಗೆ ಹೆದರಿ ಯಾರೂ ಮೌನವಾಗಿ ಕಿರುಕುಳ ಸಹಿಸಬಾರದು ಮತ್ತು ಆತ್ಮಹತ್ಯೆ ಮಾಡಿಕೊಳ್ಳಬಾರದ ಇಂತಹ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣವೇ ಪೋಲಿಸ್ ಇಲಾಖೆ ಅಥವಾ ಮಹಿಳಾ ಆಯೋಗಕ್ಕೆ ದೂರು ನೀಡಬೇಕು. ಅಪರಾಧಿಗಳ ವಿರುದ್ಧ ಆಯೋಗವು ಕಾನೂನು ಪ್ರಕಾರ ಕಠಿಣ ಕ್ರಮ ಕೈಗೊಳ್ಳಲಿದೆ ಎಂದು ಭರವಸೆ ನೀಡಿದರು.

ಬಡತನ ಮತ್ತು ಮಧ್ಯಮ ವರ್ಗದ ಹಿನ್ನೆಲೆಯಿಂದ ಬಂದು ಕಷ್ಟಪಟ್ಟು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರು, ಪೋಷಕರ ತ್ಯಾಗವನ್ನು ಸ್ಮರಿಸಿ ಶೈಕ್ಷಣಿಕ ಪ್ರಗತಿಗೆ ಮೊದಲ ಆದ್ಯತೆ ನೀಡಬೇಕು ಹಾಗೂ ಸ್ವಾವಲಂಬನೆ ಸಾಧಿಸಬೇಕು ಎಂದು ಕಿವಿಮಾತು ಹೇಳಿದರು.

ಹಿಂದಿನ ಕಾಲದಲ್ಲಿ ಹೆಣ್ಣುಮಕ್ಕಳಿಗೆ ಬಾಲ್ಯವಿವಾಹ ಮಾಡಲಾಗುತ್ತಿತ್ತು, ಆರೋಗ್ಯ ಸೌಲಭ್ಯಗಳಿಲ್ಲದೆ ಪ್ರಸವ ಸಮಯದಲ್ಲಿ ತಾಯಂದಿರು ಕಷ್ಟಪಡುತ್ತಿದ್ದರು. ಇತ್ತೀಚಿನ ದಿನಗಳಲ್ಲಿ ಅಪ್ರಾಪ್ತ ಹಾಗೂ ಯುವತಿಯರು ಪ್ರೇಮಪಾಶಕ್ಕೆ ಬಿದ್ದು, ಪೋಷಕರ ಮಾತು ಕೇಳದೆ ಓಡಿಹೋಗುತ್ತಿರುವ ಪ್ರಕರಣಗಳು ಹೆಚ್ಚಾಗುತ್ತಿದೆ. ಕಳೆದ ಕೆಲ ವರ್ಷಗಳಲ್ಲಿ ಶೇ. 75ಕ್ಕೂ ಹೆಚ್ಚು ಪೋಕ್ಸೋ ಹಾಗೂ ಪ್ರೇಮ ಪ್ರಕರಣಗಳಲ್ಲಿ ಯುವತಿಯರು ತಮ್ಮ ಶಿಕ್ಷಣ ಮತ್ತು ಭವಿಷ್ಯವನ್ನು ಅರ್ಧಕ್ಕೇ ಮೊಟಕುಗೊಳಿಸಿಕೊಳ್ಳುತ್ತಿದ್ದಾರೆ. ಪ್ರೀತಿಯ ನೆಪದಲ್ಲಿ ವಂಚನೆಗೊಳಗಾಗಿ, ಕೊನೆಗೆ 'ಜಾತಿ ಬೇರೆ' ಎಂಬ ಕಾರಣಕ್ಕೆ ತಿರಸ್ಕೃತರಾಗಿ ಜೀವನ ಹಾಳುಮಾಡಿಕೊಳ್ಳುತ್ತಿದ್ದಾರೆ. ಪ್ರತಿಯೊಬ್ಬ ಹೆಣ್ಣುಮಗಳು ತನಗಾಗಿ ಮತ್ತು ತನ್ನ ಭವಿಷ್ಯಕ್ಕಾಗಿ ಬದುಕಬೇಕೇ ವಿನಃ ಯಾರೋ ಒಬ್ಬರಿಗಾಗಿ ಜೀವ ಕಳೆದುಕೊಳ್ಳುವುದಲ್ಲ ಎಂದು ಕಿವಿಮಾತು ಹೇಳಿದರು.

ವಿದ್ಯಾರ್ಥಿ ದೆಸೆಯಲ್ಲಿ ಪ್ರೀತಿ, ಮದುವೆಗೆ ಅವಕಾಶ ನೀಡದೆ, ಮೊದಲು ಶಿಕ್ಷಣ ಪಡೆದು ತಮ್ಮ ಗುರಿಯನ್ನು ಸಾಧಿಸಬೇಕು. ಪ್ರಜಾಪ್ರಭುತ್ವದಲ್ಲಿ ದೊರೆತಿರುವ ಮತದಾನದ ಹಕ್ಕನ್ನು ಸರಿಯಾಗಿ ಚಲಾಯಿಸಿ, ಸಮಾಜದಲ್ಲಿನ ಭ್ರಷ್ಟಾಚಾರ ಹಾಗೂ ಅಸಮಾನತೆಯ ವಿರುದ್ಧ ಧ್ವನಿ ಎತ್ತಬೇಕು" ಎಂದು ಯುವಜನತೆಗೆ ಆಹ್ವಾನ ನೀಡಿದರು.

ವಿದ್ಯಾರ್ಥಿನಿ ಪ್ರೀತಿ ಅವರು ಮಾತನಾಡಿ, ಅಂಬೇಡ್ಕರ್ ವಸತಿ ನಿಲಯದಲ್ಲಿ ಕುಡಿಯುವ ನೀರು, ಬಿಸಿನೀರು, ನೈರ್ಮಲ್ಯ ಹಾಗೂ ಊಟದ ಗುಣಮಟ್ಟದ ಕುರಿತು ಸುಧಾರಣೆಯಾಗಬೇಕಿದೆ ಎಂದು ಹಾಸ್ಟೆಲ್‌ಗಳಲ್ಲಿ ಎದುರಾಗುತ್ತಿರುವ ಸಮಸ್ಯೆಗಳ ಕುರಿತು ಮುಕ್ತವಾಗಿ ಅಧಿಕಾರಿಗಳ ಗಮನಕ್ಕೆ ತಂದರು.

ಜೆ.ಎಚ್. ಪಟೇಲ್ ಬಡಾವಣೆಯ ಹಾಸ್ಟೆಲ್ ವಿದ್ಯಾರ್ಥಿನಿಯರಿಗೆ ಕಾಲೇಜು ಸಮಯಕ್ಕೆ ಅನುಕೂಲವಾಗುವಂತೆ ಬೆಳಿಗ್ಗೆ 7.30 ಮತ್ತು 8.30 ಬಸ್ ಸೌಲಭ್ಯವಿದ್ದು, ಬಸ್ಸಿನಲ್ಲಿ ಓಡಾಡಲು ಆಗುವುದಿಲ್ಲ, ಎಲ್ಲಾ ವಿದ್ಯಾರ್ಥಿಗಳು ಅದೇ ಸಮಯಕ್ಕೆ ಕಾಲೇಜಿಗೆ ತೆರಳಬೇಕಾಗಿರುವುದರಿಂದ 8.00 ಮತ್ತು 8.30 ಗಂಟೆ–ಗೆ ಹೆಚ್ಚುವರಿಯಾಗಿ ಕೆಎಸ್‌ಆರ್‌ಟಿಸಿ ಬಸ್ ಸೌಕರ್ಯ ಕಲ್ಪಿಸುವಂತೆ ಸಭೆಯಲ್ಲಿ ಮನವಿ ಮಾಡಿದರು.

ಆಪತ್ಕಾಲದಲ್ಲಿ ಮತ್ತು ತಕ್ಷಣದ ಪೋಲಿಸ್ ರಕ್ಷಣೆಗಾಗಿ 112 ಉಚಿತ ಸಹಾಯವಾಣಿಗೆ ಕರೆ ಮಾಡಬೇಕು, ಮಕ್ಕಳ ನೆರವಿಗಾಗಿ 1098 ಹಾಗೂ ಮಹಿಳೆಯರ ಸುರಕ್ಷತೆಗಾಗಿ 181 ಸಹಾಯವಾಣಿಗಳು ಲಭ್ಯವಿದ್ದು, ಸೈಬರ್ ಕ್ರೈಂ ಗೆ ಸಂಬಂಧಿಸಿದ ವಿಷಯಕ್ಕೆ 1930 ಗೆ ಕರೆಮಾಡಿ ಇವುಗಳ ಸದುಪಯೋಗ ಪಡೆದುಕೊಳ್ಳಲು ತಿಳಿಸಿದರು.

ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಿಂದ 16 ಹೊಸ ಹಾಸ್ಟೆಲ್‌ಗಳು ಮಂಜೂರಾಗಿದ್ದು, ಶೀಘ್ರದಲ್ಲೇ ನಿರ್ಮಾಣ ಕಾರ್ಯ ಆರಂಭವಾಗಲಿದೆ. ಜತೆಗೆ ಬಾಡಿಗೆ ಕಟ್ಟಡಗಳಲ್ಲಿರುವ ಹಾಸ್ಟೆಲ್‌ಗಳಲ್ಲಿ ಶೌಚಾಲಯ ಹಾಗೂ ಕುಡಿಯುವ ನೀರಿನ ಸಮಸ್ಯೆಗಳನ್ನು ಸರಿಪಡಿಸುವ ಕ್ರಮವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ಅವರು ತಿಳಿಸಿದರು.

ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ, , ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೇಖರ್ ಹೆಚ್.ಟಿ, ಎಎಸ್ಪಿ ಪರಮೇಶ್ವರ ಹೆಗಡೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ರಾಜಾನಾಯ್ಕ್ , ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಸಿದ್ದಲಿಂಗೇಶ್, ಬಿಸಿಎಂ ಅಧಿಕಾರಿ ರೇಣುಕಾ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ರಂಗಭೂಮಿ ಒಂದು ಜೀವಂತ ಕಲೆ ಟಿವಿ ಪ್ರಭಾವದ ನಡುವೆಯೂ ಅಸ್ತಿತ್ವ ಉಳಿಸಿಕೊಳ್ಳುವ ಶಕ್ತಿ ರಂಗ ಕಲೆಗಿದೆ –ಗೊರೂರು ಅನಂತರಾಜು



ಹಾಸನ : ಪೌರಾಣಿಕ ರಂಗಭೂಮಿ ನಗರ ಹಾಗೂ ಸುತ್ತಮುತ್ತಲ ಗ್ರಾಮಗಳ ಹಿರಿಯ ನಾಗರೀಕರು, ಕಲಾಪ್ರೇಮಿಗಳಿಗೆ ಸ್ಥಳೀಯ ನಾಟಕ ತಂಡಗಳು ಕಾಲಕಾಲಕ್ಕೆ ಪೌರಾಣಿಕ ನಾಟಕ ಪ್ರದರ್ಶಿಸಿ ಮನರಂಜನೆ ಒದಗಿಸಿ ಮನಸ್ಸಿಗೆ ಉಲ್ಲಾಸ ನೀಡುತ್ತಿವೆ. ನಾಟಕ ಒಂದು ಜೀವಂತ ಕಲೆ. ಟಿವಿ ಪ್ರಭಾವದ ನಡುವೆಯೂ ತನ್ನ ಅಸ್ತಿತ್ವ ಉಳಿಸಿಕೊಳ್ಳುವ ಶಕ್ತಿ ರಂಗಕಲೆಗಿದೆ ಎಂದು ಸಾಹಿತಿ ನಾಟಕಕಾರರು ಗೊರೂರು ಅನಂತರಾಜು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಸನ ಅನುದಾನದ ಅಡಿಯಲ್ಲಿ ಹಾಸನ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಹಾಸನ ಜಿಲ್ಲಾ ಕಲಾವಿದರ ಹಿತರಕ್ಷಣಾ ಸಮಿತಿಯಿಂದ ಶುಕ್ರವಾರ ನಡೆದ ರಂಗಗೀತೆ ಭರತನಾಟ್ಯ ಜಾನಪದ ಗೀತೆ ಮತ್ತು ಶೋಭಾನೆ ಪದ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು. ಹಾಸನದಲ್ಲಿ ಕೆಲವು ವರ್ಷಗಳ ಹಿಂದೆ ರಂಗಸಂಗೀತ ಸಮ್ಮೇಳನ ರಂಗಸಂಗೀತ ಪರಿಷತ್ತಿನಿಂದ ಅತ್ಯಂತ ಯಶಸ್ವಿಯಾಗಿ ನಡೆದಿತ್ತು. ಜಿಲ್ಲಾ ಕಲಾವಿದರ ಹಿತರಕ್ಷಣಾ ಸಮಿತಿಯಲ್ಲಿ 300ಕ್ಕೂ ಕಲಾವಿದ ಸದಸ್ಯರಿದ್ದಾರೆ. ಈ ಹಿಂದೆ ನಡೆದ ಮಾದರಿಯಲ್ಲಿ ಈಗಿನ ಅಧ್ಯಕ್ಷರ ಅವಧಿಯಲ್ಲಿ ರಂಗ ಸಂಗೀತ ಸಮ್ಮೇಳನವು ನಡೆಯಲೆಂದು ಗೊರೂರು ಅನಂತರಾಜು ಆಶಿಸಿದರು. ಪ್ರಾಸ್ತಾವಿಕ ನುಡಿಯಲ್ಲಿ ಕವಿ ಎನ್. ಎಲ್. ಚನ್ನೇಗೌಡ್ರು ಮಾತನಾಡಿ ಸಂಘಟನೆ ಕಟ್ಟುವುದು ಹಾಗೂ ಉಳಿಸಿಕೊಂಡು ಹೋಗುವುದು ಬಹು ಕಷ್ಟ. ಪ್ರಾಮಾಣಿಕತೆ ಇದ್ದಲ್ಲಿ ಸಂಘವು ಉಳಿದುಕೊಳ್ಳಲು ಸಾಧ್ಯ. ಕಲೆ ಎಲ್ಲರನ್ನೂ ಆಕರ್ಷಿಸುತ್ತದೆ. ಕೆಲವರನ್ನು ಮಾತ್ರ ಅಪ್ಪಿಕೊಳ್ಳುತ್ತದೆ ಎಂದರು. ಕಲಾವಿದರು ದರ್ಶನ್ ವೆಂಕಟೇಶ್ ಮಾತನಾಡಿ ಸಾಹಿತ್ಯ ಸೋಫಾನದ ಪ್ರಥಮ ಮೆಟ್ಟಿಲು ನಾಟಕ. ಸಮಾಜದ ಓರೇ ಕೋರೆಗಳನ್ನು ತಿದ್ದುವಲ್ಲಿ ನಾಟಕ ತನ್ನದೇ ಪ್ರಮುಖ ಪಾತ್ರ ನಿರ್ವಹಿಸುತ್ತಿದೆ ಎಂದರು. ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಲಾವಿದರ ಹಿತ ರಕ್ಷಣಾ ಸಮಿತಿ ಅಧ್ಯಕ್ಷರು ರವಿ ಬಿದರೆ ಮಾತನಾಡಿ ತಮ್ಮ ಅವಧಿಯಲ್ಲಿ ಸರ್ಕಾರದ ಆರ್ಥಿಕ ನೆರವು ಪಡೆದು ರಂಗ ಸಂಗೀತ ಸಮ್ಮೇಳನ ನಡೆಸಲು ಪ್ರಯತ್ನ ನಡೆಸುವುದಾಗಿ ಭರವಸೆ ನೀಡಿ–ದರು. ಪೌರಾಣಿಕ ನಾಟಕ ನಿರ್ದೇಶಕರುಗಳಾದ ಎ.ಸಿ.ರಾಜು, ಎಂ ಮಹದೇವ್, ಪಾಲಾಕ್ಷಾಚಾರ್, ವೀರಭದ್ರಾಚಾರ್, ಹಿರಿಯ ನಟರು ಪೋಲೀಸ್ ನಂಜಪ್ಪ, ತಬಲ ಕೃಷ್ಣಪ್ಪ, ಸೀನ್ಸ್ ಲಕ್ಷ್ಮಣ್ ಕಲಾವಿದೆ ಲಕ್ಷ್ಮಮ್ಮ ಮೆಳಗೋಡು ರನ್ನು ಸನ್ಮಾನಿಸಲಾಯಿತು. ಕಲಾವಿದರು ಗ್ಯಾರಂಟಿ ರಾಮಣ್ಣ, ತೇಜೂರು ಸೋಮಣ್ಣ, ಎಚ್.ಎಲ್. ಶಶಿಕಾಂತ್, ಪ್ರಕಾಶ್ ತಟ್ಟೇಕೆರೆ, ನಾಗರಾಜ್ ಸಿ.ಜಿ. ಪ್ರಭಾಕರ್, ರಮೇಶ್ ಗೌಡಪ್ಪ . ಪೊಲೀಸ್ ರಂಗಸ್ವಾಮಿ, ಸಂಘದ ಪದಾಧಿಕಾರಿಗಳು, ನಿರ್ದೇಶಕರು ಇದ್ದರು. ಸಾವಿತ್ರಿ ಗಂಗಾಧರ್ ಪ್ರಾರ್ಥಿಸಿದರು. ನಟ ಪ್ರದೀಪ್ ಗವೇನಹಳ್ಳಿ ಕಾರ್ಯಕ್ರಮ ನಿರೂಪಿಸಿದರು. ನಟ ನಾಗಮೋಹನ್ ವಂದಿಸಿದರು.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.